ಸಂಪುಟ : 11 ಸಂಚಿಕೆ: 97 ಪುಟ : 4+2 ಬೆಲೆ: 3.00 ರವಿವಾರ ಮೇ 17 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 97 Pages : 4+2 Price : 3.00 Sunday May 17 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಜೆಇಇ, ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳಿಗೆ ಕಟ್ಟೆಚ್ಚರ..!

■ ವಿಜಯಸಾಕ್ಷಿ ಸುದ್ದಿ, ಗದಗ

ಜಾಯಿಂಟ್ ಎಂಟ್ರನ್ಸ್ ಎಕ್ಸಾಮಿನೇಷನ್ (ಜೆಇಇ ಅಡ್ವಾನ್ಸ್)–2026 ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2 ಹಿನ್ನೆಲೆಯಲ್ಲಿ ಗದಗ ಜಿಲ್ಲೆಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತ ಪ್ರತಿಬಂಧಕಾಜ್ಞೆ ಜಾರಿಗೊಳಿಸಿ ಜಿಲ್ಲಾಡಳಿತ ಕಟ್ಟುನಿಟ್ಟಿನ ಕ್ರಮ ಕೈಗೊಂಡಿದೆ.

ರಾಷ್ಟ್ರೀಯ ಪರೀಕ್ಷಾ ಪ್ರಾಧಿಕಾರ, ನವದೆಹಲಿ ವತಿಯಿಂದ ಮೇ 17ರಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 5.30ರವರೆಗೆ ಜರುಗಲಿರುವ ಜಾಯಿಂಟ್ ಎಂಟ್ರನ್ಸ್ ಎಕ್ಸಾಮಿನೇಷನ್ (ಜೆಇಇ ಅಡ್ವಾನ್ಸ್)–2026 ಪರೀಕ್ಷೆಯ ವೇಳೆ ನಕಲು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಸೇರಿದಂತೆ ಅಕ್ರಮಗಳನ್ನು ತಡೆಗಟ್ಟುವ ಉದ್ದೇಶದಿಂದ ಲಕ್ಷ್ಮೇಶ್ವರದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ. ಅಗಡಿ ಕಾಲೇಜ್ ಆಫ್ ಎಂಜಿನಿಯರಿಂಗ್ ಮತ್ತು ಟೆಕ್ನಾಲಜಿ ಪರೀಕ್ಷಾ ಕೇಂದ್ರದ ಸುತ್ತ 300 ಮೀಟರ್ ವ್ಯಾಪ್ತಿಯನ್ನು ನಿಷೇಧಿತ ಪ್ರದೇಶವನ್ನಾಗಿ ಘೋಷಿಸಲಾಗಿದೆ.

ಮೇ 17ರಂದು ಬೆಳಿಗ್ಗೆ 8 ಗಂಟೆಯಿಂದ ಸಂಜೆ 7 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಯಲ್ಲಿರಲಿದೆ.

▶▶ 4ನೇ ಪುಟಕ್ಕೆ

## ಪಡಿತರ ಕಾರ್ಡ್‌ಗೆ ಮತ್ತೆ ಅವಕಾಶ..!

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಸಾರ್ವಜನಿಕರಿಗೆ ಪಡಿತರ ಚೀಟಿಗಳಿಗೆ ಸಂಬಂಧಿಸಿದ ವಿವಿಧ ಸೇವೆಗಳಿಗಾಗಿ ಗ್ರಾಮ್ ಒನ್ ಹಾಗೂ ಕರ್ನಾಟಕ ಒನ್ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

ಸರ್ಕಾರದಿಂದ ಬಂದಿರುವ ಪಟ್ಟಿಯಲ್ಲಿನ ಇ–ಶ್ರಮ ಕಾರ್ಡ್ ಹೊಂದಿರುವ ಕಾರ್ಮಿಕ ವರ್ಗದವರಿಗೆ ಹೊಸ ಪಡಿತರ ಕಾರ್ಡ್ ಪಡೆಯಲು ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆ. ಈ ಸೇವೆ ಬೆಳಿಗ್ಗೆ 10ರಿಂದ ಸಂಜೆ 5 ಗಂಟೆಯವರೆಗೆ ಲಭ್ಯವಿರಲಿದೆ.

ಹೊಸ ಪಡಿತರ ಕಾರ್ಡ್‌ಗೆ ಅರ್ಜಿ ಸಲ್ಲಿಸಿರುವವರಿಗೆ ಸರ್ಕಾರದಿಂದ ಪ್ರಕಟಿಸಲಾದ ವೈದ್ಯಕೀಯ ಚಿಕಿತ್ಸೆ ಪಟ್ಟಿಯಲ್ಲಿನ ತುರ್ತು ಚಿಕಿತ್ಸೆಗೆ ಮಂಜೂರಾತಿ ನೀಡಲು ಅವಕಾಶ ಕಲ್ಪಿಸಲಾಗಿದ್ದು, ಈ ಸೇವೆ ಬೆಳಿಗ್ಗೆ 10ರಿಂದ ರಾತ್ರಿ 9 ಗಂಟೆಯವರೆಗೆ ದೊರೆಯಲಿದೆ.

ಇದೇ ವೇಳೆ ತುರ್ತು ವೈದ್ಯಕೀಯ ಚಿಕಿತ್ಸೆಯಡಿ ಹೊಸ ಪಡಿತರ ಚೀಟಿಗೆ ಅರ್ಜಿ ಸಲ್ಲಿಸಲು ಸಾರ್ವಜನಿಕರಿಗೆ ಅವಕಾಶ ಕಲ್ಪಿಸಲಾಗಿದ್ದು, ಈ ಸೇವೆ ಬೆಳಿಗ್ಗೆ 10ರಿಂದ ಸಂಜೆ 5 ಗಂಟೆಯವರೆಗೆ ಲಭ್ಯವಿರುತ್ತದೆ.

▶▶ 4ನೇ ಪುಟಕ್ಕೆ

### ದೇಶದ ಅಗ್ರ ಪುರಾತತ್ವ ಕೇಂದ್ರವನ್ನಾಗಿಸಲು ಸಚಿವ ಎಚ್.ಕೆ. ಪಾಟೀಲ ಮಾಸ್ಟರ್ ಪ್ಲಾನ್

# ಲಕ್ಕುಂಡಿಗೆ 'ಹೆರಿಟೇಜ್ ಹಬ್' ಕನಸು..!

**2026ರೊಳಗೆ 50 ಬಾವಿ, 50 ದೇವಾಲಯಗಳ ಗುರುತು; ಲಕ್ಕುಂಡಿಯ ಪಾರಂಪರಿಕ ತಾಣಗಳ ಸಂಖ್ಯೆಯನ್ನು 100ರ ಗಡಿಗೆ ತಲುಪಿಸುವ ಗುರಿ**

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು/ಗದಗ

"ಐತಿಹಾಸಿಕ, ಸಾಂಸ್ಕೃತಿಕ ಹಾಗೂ ಪುರಾತತ್ವ ವೈಭವವನ್ನು ಒಳಗೊಂಡಿರುವ ಲಕ್ಕುಂಡಿಯನ್ನು ದೇಶದ ಅಗ್ರ ಪುರಾತತ್ವ ಕೇಂದ್ರವನ್ನಾಗಿ ರೂಪಿಸುವ ದಿಸೆಯಲ್ಲಿ ಸಮಗ್ರ ಯೋಜನೆಗಳೊಂದಿಗೆ ಕಾರ್ಯನಿರ್ವಹಿಸಬೇಕು" ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು.

ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಮಟ್ಟದ ಸಲಹಾ ಸಮಿತಿ ಸಭೆಯು ಶನಿವಾರ ಬೆಂಗಳೂರಿನ ವಿಧಾನಸೌಧದ ಕೊಠಡಿ ಸಂಖ್ಯೆ 106ರಲ್ಲಿ ಸಚಿವ ಎಚ್.ಕೆ. ಪಾಟೀಲ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ಸಭೆಯಲ್ಲಿ ಮಾತನಾಡಿದ ಸಚಿವ ಎಚ್.ಕೆ. ಪಾಟೀಲ, ಲಕ್ಕುಂಡಿಯ ಪುರಾತತ್ವ ಸಂಪತ್ತಿನ ಸಂರಕ್ಷಣೆ, ದೇವಾಲಯಗಳ ಪುನರುಜ್ಜೀವನ, ಪುರಾತನ ಬಾವಿಗಳ ಅಭಿವೃದ್ಧಿ ಹಾಗೂ ಪ್ರವಾಸೋದ್ಯಮಕ್ಕೆ ಅಗತ್ಯ ಮೂಲಸೌಕರ್ಯ ಕಲ್ಪಿಸುವ ಕಾರ್ಯಗಳನ್ನು ಸಮನ್ವಯದಿಂದ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.



ಗದಗ ಜಿಲ್ಲೆಯ ಲಕ್ಕುಂಡಿಯಲ್ಲಿ ಈಗಾಗಲೇ 15 ಬಾವಿ ಹಾಗೂ 15 ದೇವಾಲಯಗಳನ್ನು ಸಾರ್ವಜನಿಕರಿಗೆ ಪರಿಚಯಿಸಲಾಗಿದ್ದು, ಕಾಲಕ್ರಮೇಣ ನಿರ್ಲಕ್ಷ್ಯಕ್ಕೆ ಒಳಗಾಗಿ ತಮ್ಮ ಗುರುತನ್ನು ಕಳೆದುಕೊಂಡಿದ್ದ ಅನೇಕ ಪಾರಂಪರಿಕ ತಾಣಗಳನ್ನು ಸರ್ಕಾರ ಮತ್ತು ಸ್ಥಳೀಯರ ಸಹಕಾರದಿಂದ ಮರು ಅನಾವರಣಗೊಳಿಸುವ ಕಾರ್ಯ ಯಶಸ್ವಿಯಾಗಿ ನಡೆಯುತ್ತಿದೆ ಎಂದು ಅವರು ತಿಳಿಸಿದರು.

2026ರೊಳಗೆ ಕನಿಷ್ಠ 50 ಬಾವಿ ಹಾಗೂ 50 ದೇವಾಲಯಗಳನ್ನು ಗುರುತಿಸಿ, ಲಕ್ಕುಂಡಿಯ ಪಾರಂಪರಿಕ ತಾಣಗಳ ಸಂಖ್ಯೆಯನ್ನು 100ರ ಗಡಿಗೆ ತಲುಪಿಸುವ ಮಹತ್ವಾಕಾಂಕ್ಷಿ ಗುರಿ ಹೊಂದಲಾಗಿದೆ.

> "ಲಕ್ಕುಂಡಿಯನ್ನು ದೇಶದ ಅಗ್ರ ಪುರಾತತ್ವ ಕೇಂದ್ರವನ್ನಾಗಿ ರೂಪಿಸುವ ಗುರಿಯೊಂದಿಗೆ ಸರ್ಕಾರ ಸಮಗ್ರ ಯೋಜನೆ ರೂಪಿಸಿದೆ. ಇತಿಹಾಸದಲ್ಲಿ ಉಲ್ಲೇಖವಾಗಿರುವ ಬಾವಿ ಹಾಗೂ ದೇವಾಲಯಗಳನ್ನು ಪತ್ತೆಹಚ್ಚಿ ಸಂರಕ್ಷಿಸುವ ಕಾರ್ಯಕ್ಕೆ ವೇಗ ನೀಡಲಾಗುತ್ತದೆ."
> – **ಎಚ್.ಕೆ. ಪಾಟೀಲ,** ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ

ಈ ಯೋಜನೆ ಸಾಕಾರಗೊಳ್ಳಲು ಸ್ಥಳೀಯರ ಸಹಕಾರ ಅತ್ಯಂತ ಅಗತ್ಯವಾಗಿದೆ ಎಂದು ಸಚಿವರು ಹೇಳಿದರು.

ಇತಿಹಾಸದಲ್ಲಿ ಲಕ್ಕುಂಡಿಯಲ್ಲಿ ಅನೇಕ ಬಾವಿ ಹಾಗೂ ದೇವಾಲಯಗಳಿರುವ ಬಗ್ಗೆ ಉಲ್ಲೇಖಗಳಿದ್ದು, ಅವುಗಳನ್ನು ಹೆಕ್ಕಿ ಹೊರತೆಗೆದು ಸಂರಕ್ಷಿಸುವ ಕಾರ್ಯವನ್ನು ಪ್ರಾಧಿಕಾರ ಕೈಗೊಳ್ಳಬೇಕು. ಈ ದಿಶೆಯಲ್ಲಿ ಅಧಿಕಾರಿಗಳು ಹಾಗೂ ಪ್ರಾಧಿಕಾರದ ಸದಸ್ಯರು ಚುರುಕಾಗಿ ಕಾರ್ಯನಿರ್ವಹಿಸಬೇಕು ಎಂದು ಸಚಿವರು ಸೂಚಿಸಿದರು.

▶▶ 3ನೇ ಪುಟಕ್ಕೆ

### ಸ್ವಚ್ಛತಾ ಜಾಗೃತಿಯ ಉದ್ದೇಶವೇ ಮಂಕು: ಸಾರ್ವಜನಿಕರ ಆಕ್ರೋಶ

# 'ಸೆಲ್ಫಿಗೆ ಸೀಮಿತ' ಕಮ್ಯೂನಿಟಿ ಮೊಬಿಲೈಜರ್‌ಗಳು..?

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಗರಗಳು ಮತ್ತು ಪಟ್ಟಣಗಳನ್ನು ಸ್ವಚ್ಛವಾಗಿಡಲು ಹಾಗೂ ಸಾರ್ವಜನಿಕರಲ್ಲಿ ಕಸ ವಿಲೇವಾರಿ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ನೇಮಕ ಮಾಡಿರುವ ಕಮ್ಯೂನಿಟಿ ಮೊಬಿಲೈಜರ್ ಹುದ್ದೆಗಳ ಕಾರ್ಯಕ್ಷಮತೆ ಕುರಿತು ಸಾರ್ವಜನಿಕ ವಲಯದಲ್ಲಿ ತೀವ್ರ ಅಸಮಾಧಾನ ವ್ಯಕ್ತವಾಗುತ್ತಿದೆ.

ಸ್ವಚ್ಛ ಭಾರತ ಮಿಷನ್ 2.0 ಅಡಿಯಲ್ಲಿ ಮಾಹಿತಿ, ಶಿಕ್ಷಣ ಮತ್ತು ಸಂವಹನ (ಐಇಸಿ) ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಮಹಿಳಾ ಸ್ವಸಹಾಯ ಸಂಘಗಳ ಮೂಲಕ ರಾಜ್ಯಾದ್ಯಂತ 2605 ಕಮ್ಯೂನಿಟಿ ಮೊಬಿಲೈಜರ್‌ಗಳನ್ನು ಜುಲೈ 2025ರಿಂದ ಗೌರವಧನ ಆಧಾರದ ಮೇಲೆ ಮೂರು ವರ್ಷಗಳ ಅವಧಿಗೆ ನೇಮಕ ಮಾಡಲಾಗಿದೆ.

ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಜನಸಂಖ್ಯೆ ಆಧಾರದ ಮೇಲೆ ನೇಮಕಾತಿ ಮಾಡಲಾಗಿದ್ದು, ಅವರಿಗೆ ಮಾಸಿಕ ₹17 ಸಾವಿರದಿಂದ ₹18 ಸಾವಿರಕ್ಕೂ ಹೆಚ್ಚು ಗೌರವಧನ ನಿಗದಿಪಡಿಸಲಾಗಿದೆ.




ಕಮ್ಯೂನಿಟಿ ಮೊಬಿಲೈಜರ್‌ಗಳ ಮುಖ್ಯ ಕರ್ತವ್ಯ ಮನೆ ಮನೆಗೆ ತೆರಳಿ ಹಸಿ–ಒಣ ಕಸ ವಿಂಗಡಣೆ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದು, ಸ್ವಚ್ಛತಾ ವಾಹನಗಳ ಕಾರ್ಯ ಪರಿಶೀಲಿಸುವುದು ಹಾಗೂ ಕಸ ವಿಲೇವಾರಿ ಕುರಿತು ಮಾಹಿತಿ ಸಂಗ್ರಹಿಸಿ ಹಿರಿಯ ಅಧಿಕಾರಿಗಳಿಗೆ ವರದಿ ಸಲ್ಲಿಸುವುದಾಗಿದೆ.

ಆದರೆ, ನೆಲಮಟ್ಟದಲ್ಲಿ ಈ ಕಾರ್ಯಗಳು ಸಮರ್ಪಕವಾಗಿ ನಡೆಯುತ್ತಿಲ್ಲ ಎಂಬ ಆರೋಪ ಕೇಳಿ ಬಂದಿದೆ.

ಪ್ರತಿದಿನ ಬೆಳಿಗ್ಗೆ ಪೌರಕಾರ್ಮಿಕರು ನಡೆಸುವ ಸ್ವಚ್ಛತಾ ಕಾರ್ಯದ ಬಳಿ ಹೋಗಿ ಸೆಲ್ಫಿ ತೆಗೆದು ಗ್ರೂಪ್‌ಗೆ ಹಾಕುವುದೇ ಕಮ್ಯೂನಿಟಿ ಮೊಬಿಲೈಜರ್ ಕೆಲಸ ಎಂಬಂತಾಗಿದೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

> "ಪೌರಕಾರ್ಮಿಕರೇ ಹೆಚ್ಚು ಶ್ರಮವಹಿಸಿ ಕೆಲಸ ಮಾಡುತ್ತಿದ್ದಾರೆ. ಕಮ್ಯೂನಿಟಿ ಮೊಬಿಲೈಜರ್‌ಗಳಿಗಿಂತ ಪೌರಕಾರ್ಮಿಕರ ಸಂಬಳ ಹೆಚ್ಚಿಸಿ ಅವರಿಗೆ ಪ್ರೋತ್ಸಾಹ ನೀಡುವುದು ಸೂಕ್ತ."
> – **ಜ್ಯೋತಿ ಪಾಯಪ್ಪಗೌಡ್ರ,** ಮಾಜಿ ಸದಸ್ಯೆ, ಪಟ್ಟಣ ಪಂಚಾಯಿತಿ ನರೇಗಲ್ಲ

ನರೇಗಲ್ಲ ಪಟ್ಟಣದ ಕೈಗಾ–ಇಲಕಲ್ಲ ರಾಜ್ಯ ಹೆದ್ದಾರಿಯ ಪಕ್ಕದಲ್ಲೇ ಕಸದ ರಾಶಿಗಳು ಬಿದ್ದಿರುವುದು ಸ್ವಚ್ಛತಾ ಕಾರ್ಯದ ವೈಫಲ್ಯಕ್ಕೆ ಸಾಕ್ಷಿಯಾಗಿದೆ ಎಂದು ಸ್ಥಳೀಯರು ದೂರಿದ್ದಾರೆ.

ಪಟ್ಟಣದ ಜನರಿಗೆ ಸ್ವಚ್ಛತೆ ಬಗ್ಗೆ ಜಾಗೃತಿ ಮೂಡಿಸುವುದು, ಆರೋಗ್ಯ ನಿರೀಕ್ಷಕರೊಂದಿಗೆ ಸಮನ್ವಯ ಸಾಧಿಸುವುದು ಹಾಗೂ ಬೆಳಿಗ್ಗೆ 6 ಗಂಟೆಯಿಂದ ಪೌರಕಾರ್ಮಿಕರ ಕಾರ್ಯವನ್ನು ಮೇಲ್ವಿಚಾರಣೆ ಮಾಡುವುದು ಕಮ್ಯೂನಿಟಿ ಮೊಬಿಲೈಜರ್‌ಗಳ ಜವಾಬ್ದಾರಿಯಾಗಿತ್ತು. ಆದರೆ ಆ ಕೆಲಸಗಳು ನಡೆಯುತ್ತಿಲ್ಲ ಎಂದು ಆರೋಪಿಸಲಾಗಿದೆ.

### ಸಮುದಾಯ ಆರೋಗ್ಯ ಕೇಂದ್ರಕ್ಕೆ ಆಗ್ರಹಿಸಿ ಪ್ರತಿಭಟನೆ

# ಆರೋಗ್ಯ ಸೇವೆಗೆ ಡಂಬಳ ಜನರ ಹೋರಾಟ..!

■ ವಿಜಯಸಾಕ್ಷಿ ಸುದ್ದಿ, ಡಂಬಳ

ಡಂಬಳ ಗ್ರಾಮದಲ್ಲಿ ಸಮುದಾಯ ಆರೋಗ್ಯ ಕೇಂದ್ರ ಮಂಜೂರು ಮಾಡುವಂತೆ ಆಗ್ರಹಿಸಿ ಸರ್ವೋದಯ ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ವಿವಿಧೋದ್ದೇಶಗಳ ಸಂಸ್ಥೆ ಮತ್ತು ಅಹಿಂದ ಜನತಾ ಸಂಘದ ಸಹಯೋಗದಲ್ಲಿ ಶುಕ್ರವಾರ ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನಾಕಾರರು ಜಿಲ್ಲಾ ವೈದ್ಯಾಧಿಕಾರಿ ಎಸ್.ಎಸ್. ನೀಲಗುಂದ ಹಾಗೂ ಉಪ ತಹಸೀಲ್ದಾರ್ ಎಸ್.ಎಚ್. ಬಿಚ್ಚಾಲಿ ಅವರ ಮುಖಾಂತರ ಮುಖ್ಯಮಂತ್ರಿಗೆ ಮನವಿ ಸಲ್ಲಿಸಿದರು.

ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ಆರಂಭವಾದ ಪ್ರತಿಭಟನೆ ಮುಖ್ಯ ಬಜಾರ್, ಬಸವೇಶ್ವರ ವೃತ್ತ ಮೂಲಕ ನಾಡಕಚೇರಿವರೆಗೆ ಸಾಗಿತು.

ಈ ವೇಳೆ ಮಾತನಾಡಿದ ಸರ್ವೋದಯ ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ವಿವಿಧೋದ್ದೇಶಗಳ ಸಂಸ್ಥೆಯ ಕಾರ್ಯದರ್ಶಿ ಗುಡದಪ್ಪ ತಳಗೇರಿ, "ಡಂಬಳ ಗ್ರಾಮದಲ್ಲಿ ಬಡವರು, ರೈತರು, ಕೂಲಿ ಕಾರ್ಮಿಕರು ಸಮರ್ಪಕ ವೈದ್ಯಕೀಯ ಸೇವೆ ಸಿಗದೇ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ಇಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರ 'ಆಟಕ್ಕುಂಟು ಲೆಕ್ಕಕ್ಕೆ ಇಲ್ಲ' ಎಂಬಂತಾಗಿದೆ" ಎಂದು ಆಕ್ರೋಶ ವ್ಯಕ್ತಪಡಿಸಿದರು.




ತುರ್ತು ಚಿಕಿತ್ಸೆಗೆ ಅಂಬುಲೆನ್ಸ್ ಸಿಗದೇ ಮೃತಪಟ್ಟ ಸಂತೋಷನ ಸಾವಿಗೆ ನ್ಯಾಯ ಸಿಗಬೇಕು. 28 ಗ್ರಾಮಗಳನ್ನು ಒಳಗೊಂಡ ಡಂಬಳ ಹೋಬಳಿಯ ಜನರು ಆರೋಗ್ಯ ಸೇವೆಗೆ ಪರದಾಡುವ ಪರಿಸ್ಥಿತಿ ಎದುರಿಸುತ್ತಿದ್ದಾರೆ. ತುರ್ತು ಚಿಕಿತ್ಸೆ ಸಿಗದೇ ಸಾವು–ನೋವುಗಳು ಸಂಭವಿಸುತ್ತಿದ್ದು, ಇದಕ್ಕೆ ಸರ್ಕಾರ ಹಾಗೂ ಸ್ಥಳೀಯ ಶಾಸಕರ ನಿರ್ಲಕ್ಷ್ಯವೇ ಕಾರಣ ಎಂದು ದೂರಿದರು.

ಅಹಿಂದ ಜನತಾ ಸಂಘದ ಅಧ್ಯಕ್ಷ ಪ್ರಕಾಶ ಮೇಗೂರ ಹಾಗೂ ಯುವ ಮುಖಂಡ ಗೋಪಾಲ ಗದಗಿನ ಮಾತನಾಡಿ, ಆಸ್ಪತ್ರೆಯಲ್ಲಿ ತುರ್ತು ಅಂಬುಲೆನ್ಸ್ ಸೇವೆ ಒದಗಿಸಬೇಕು. ಹಗಲು–ರಾತ್ರಿ ವೈದ್ಯರು ಸ್ಥಳೀಯವಾಗಿ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು. ಸಂತೋಷ ಕುಟುಂಬಕ್ಕೆ ಸರ್ಕಾರದಿಂದ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ ಲಕ್ಷ್ಮಣ ದೊಡ್ಡಮನಿ ಮಾತನಾಡಿ, "ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲು ಅಧಿಕಾರಿಗಳು ಕಾನೂನಿನ ನೆಪ ಹೇಳುತ್ತಿರುವುದು ಜನಸಾಮಾನ್ಯರಿಗೆ ಮಾಡುತ್ತಿರುವ ದ್ರೋಹ" ಎಂದು ಕಿಡಿಕಾರಿದರು.

15 ದಿನಗಳೊಳಗೆ ಸಮುದಾಯ ಆರೋಗ್ಯ ಕೇಂದ್ರ ಮಂಜೂರಾಗದಿದ್ದರೆ ಪ್ರಾಥಮಿಕ ಆರೋಗ್ಯ ಕೇಂದ್ರ ಬಂದ್ ಮಾಡಿ ಡಂಬಳದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ವಿವಿಧ ಸಂಘಟನೆಗಳ ಸಹಯೋಗದಲ್ಲಿ ನೂರಾರು ಯುವಕರೊಂದಿಗೆ ಕಾಲ್ನಡಿಗೆ ಜಾಥ ಹಮ್ಮಿಕೊಳ್ಳುವುದಾಗಿ ಎಚ್ಚರಿಕೆ ನೀಡಿದರು.

ಮನವಿ ಸ್ವೀಕರಿಸಿ ಮಾತನಾಡಿದ ಜಿಲ್ಲಾ ವೈದ್ಯಾಧಿಕಾರಿ ಎಸ್.ಎಸ್. ನೀಲಗುಂದ, "ಸಮುದಾಯ ಆರೋಗ್ಯ ಕೇಂದ್ರ ಸ್ಥಾಪನೆ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಲಾಗಿದೆ. ಸರ್ಕಾರದಿಂದ ಸಕಾರಾತ್ಮಕ ಸ್ಪಂದನೆ ದೊರೆತಿದ್ದು, ಮೂರು–ನಾಲ್ಕು ತಿಂಗಳಲ್ಲಿ ಮಂಜೂರಾಗುವ ನಿರೀಕ್ಷೆ ಇದೆ" ಎಂದು ಭರವಸೆ ನೀಡಿದರು.

ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಅಗತ್ಯ ವೈದ್ಯರು, ಸಿಬ್ಬಂದಿ ಹಾಗೂ ಮೂಲಸೌಕರ್ಯ ಒದಗಿಸಲು ಕ್ರಮ ಕೈಗೊಳ್ಳುವುದಾಗಿ ಅವರು ತಿಳಿಸಿದರು.

ಪ್ರತಿಭಟನೆಯಲ್ಲಿ ವಿವಿಧ ಸಂಘಟನೆಗಳ ಮುಖಂಡರು, ರೈತರು, ಹಸಿರು ಸೇನೆ, ತುಂಗಭದ್ರಾ, ಡಿಎಸ್‌ಎಸ್ ಸಂಘಟನೆಗಳ ಪದಾಧಿಕಾರಿಗಳು ಭಾಗವಹಿಸಿದ್ದರು.

> "15 ದಿನಗಳೊಳಗೆ ಸಮುದಾಯ ಆರೋಗ್ಯ ಕೇಂದ್ರ ಮಂಜೂರು ಮಾಡದಿದ್ದರೆ ಡಂಬಳದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಕಾಲ್ನಡಿಗೆ ಜಾಥ ನಡೆಸಲಾಗುವುದು."
> – **ಗುಡದಪ್ಪ ತಳಗೇರಿ,** ಕಾರ್ಯದರ್ಶಿ, ಸರ್ವೋದಯ ಸಂಸ್ಥೆ

### ಮೇ 17–18 ಹಾಗೂ 23–24ರಂದು ಜಿಲ್ಲೆಯಾದ್ಯಂತ ವಿಶೇಷ ಶಿಬಿರ– ಜಿಲ್ಲಾಧಿಕಾರಿ ಸ್ನೇಹಲ್ ಆರ್.

# ಮತದಾರರ ಪಟ್ಟಿಗೆ ಮೆಗಾ ಮ್ಯಾಪಿಂಗ್ ಅಭಿಯಾನ..!

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲೆಯ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಹಿನ್ನೆಲೆಯಲ್ಲಿ ಮೇ 17 ಮತ್ತು 18ರಂದು ಮೊದಲ ಹಂತ ಹಾಗೂ ಮೇ 23 ಮತ್ತು 24ರಂದು ಎರಡನೇ ಹಂತದ ವಿಶೇಷ ಅಭಿಯಾನ ಆಯೋಜಿಸಲಾಗುತ್ತಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಸ್ನೇಹಲ್ ಆರ್. ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, 2025ರ ಮತದಾರರ ಪಟ್ಟಿಯಲ್ಲಿ ನೋಂದಾಯಿತ 40 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ಮತದಾರರು ಹಾಗೂ ಅವರ ಕುಟುಂಬ ಸದಸ್ಯರನ್ನು 2002ರ ಮತದಾರರ ಪಟ್ಟಿಗೆ ಮ್ಯಾಪಿಂಗ್ ಮತ್ತು ಪ್ರೋಜೆನಿ



(Linking and Progeny) ಮಾಡುವ ಕಾರ್ಯ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಈ ಮ್ಯಾಪಿಂಗ್ ಮತ್ತು ಪ್ರೋಜೆನಿ ಪ್ರಕ್ರಿಯೆ ಪೂರ್ಣಗೊಂಡಲ್ಲಿ ಅಂತಹ ಮತದಾರರಿಂದ ಪೂರಕ ದಾಖಲೆಗಳನ್ನು ಪಡೆಯದೇ ನೇರವಾಗಿ ಹೊಸ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ ಮಾಡಲು ಅವಕಾಶ ದೊರೆಯಲಿದೆ. ತಪ್ಪಿದಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ವೇಳೆ ಅಗತ್ಯ ದಾಖಲೆಗಳನ್ನು ಸಲ್ಲಿಸಿ ಹೆಸರು ಸೇರ್ಪಡೆ ಮಾಡಿಸಬೇಕಾಗುತ್ತದೆ ಎಂದು ಅವರು ಹೇಳಿದ್ದಾರೆ.

ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೆ ಕೇಂದ್ರ ಅಥವಾ ರಾಜ್ಯ ಸರ್ಕಾರದ ಗುರುತಿನ ಚೀಟಿ, ಪಿಂಚಣಿ ಪಾವತಿ ಆದೇಶ, ಜನನ ಪ್ರಮಾಣಪತ್ರ, ಪಾಸ್‌ಪೋರ್ಟ್, ಶೈಕ್ಷಣಿಕ ಪ್ರಮಾಣಪತ್ರ, ಶಾಶ್ವತ ನಿವಾಸ ಪ್ರಮಾಣಪತ್ರ, ಜಾತಿ ಪ್ರಮಾಣಪತ್ರ, ಕುಟುಂಬ ನೋಂದಣಿ, ಭೂಮಿ ಅಥವಾ ಮನೆ ಹಂಚಿಕೆ ದಾಖಲೆ ಸೇರಿದಂತೆ ವಿವಿಧ ದಾಖಲೆಗಳನ್ನು ಭಾರತ ಚುನಾವಣಾ ಆಯೋಗ ಮಾನ್ಯಗೊಳಿಸಿದೆ ಎಂದು ವಿವರಿಸಿದ್ದಾರೆ.

ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳಲ್ಲಿ ಮೇ 15ರವರೆಗೆ ಮ್ಯಾಪಿಂಗ್ ಕಾರ್ಯದಲ್ಲಿ ಶೇ. 66.99, ಪ್ರೋಜೆನಿ ಕಾರ್ಯದಲ್ಲಿ ಶೇ. 116.27 ಹಾಗೂ ಮ್ಯಾಪಿಂಗ್–ಲಿಂಕಿಂಗ್ ಪ್ರೋಜೆನಿ ಕಾರ್ಯದಲ್ಲಿ ಶೇ. 87.77 ಪ್ರಗತಿ ಸಾಧಿಸಲಾಗಿದೆ. ಇನ್ನೂ ಬಾಕಿ ಇರುವ ಮತದಾರರನ್ನು ಒಳಗೊಳ್ಳಲು ವಿಶೇಷ ಅಭಿಯಾನ ಆಯೋಜಿಸಲಾಗಿದೆ ಎಂದು ತಿಳಿಸಿದ್ದಾರೆ.

> "ಪ್ರತಿ ಮತದಾರರ ಹೆಸರು ಮ್ಯಾಪಿಂಗ್ ಮತ್ತು ಪ್ರೋಜೆನಿ ಪ್ರಕ್ರಿಯೆಯಲ್ಲಿ ಸೇರಬೇಕು. ಸಾರ್ವಜನಿಕರು ತಪ್ಪದೇ ಮತಗಟ್ಟೆಗಳಿಗೆ ಭೇಟಿ ನೀಡಿ ವಿವರಗಳನ್ನು ಖಚಿತಪಡಿಸಿಕೊಳ್ಳಬೇಕು."
> – **ಸ್ನೇಹಲ್ ಆರ್.,** ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ

▶▶ 3ನೇ ಪುಟಕ್ಕೆ

## ಕ್ಷೇತ್ರ ಶಿಕ್ಷಣಾಧಿಕಾರಿಯಾಗಿ ಎಸ್. ಜಗದೀಶ್ ಅಧಿಕಾರ ಸ್ವೀಕಾರ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ನೂತನ ಕ್ಷೇತ್ರ ಶಿಕ್ಷಣಾಧಿಕಾರಿಯಾಗಿ ಎಸ್. ಜಗದೀಶ್ ಅವರು ಶನಿವಾರ ಅಧಿಕಾರ ಸ್ವೀಕರಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಗ್ರೂಪ್-ಬಿ ಸರ್ಕಾರಿ ಪ್ರೌಢಶಾಲಾ ಶಿಕ್ಷಕರು ಹಾಗೂ ತತ್ಸಮಾನ ವೃಂದದ ಅಧಿಕಾರಿಗಳಿಗೆ ಗ್ರೂಪ್-ಎ ಹುದ್ದೆಗೆ ಬಡ್ತಿ ನೀಡಿ ಸ್ಥಳ ನಿಯುಕ್ತಿಗೊಳಿಸಿದ ಸರ್ಕಾರದ ಆದೇಶದ ಮೇರೆಗೆ ಅವರು ಕರ್ತವ್ಯಕ್ಕೆ ಹಾಜರಾದರು.

> "ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಹಾಗೂ ಶಿಕ್ಷಣ ಇಲಾಖೆಯ ಅಭಿವೃದ್ಧಿಗೆ ಎಲ್ಲರ ಸಹಕಾರದೊಂದಿಗೆ ಕಾರ್ಯನಿರ್ವಹಿಸಲಾಗುವುದು."
>
> **- ಎಸ್. ಜಗದೀಶ್,** ಕ್ಷೇತ್ರ ಶಿಕ್ಷಣಾಧಿಕಾರಿ

ಈ ಸಂದರ್ಭದಲ್ಲಿ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಎಂ.ಪಿ.ಎಂ. ಮಂಜುನಾಥ, ತಾಲೂಕು ಕಾರ್ಯದರ್ಶಿ ಟಿ. ಸೋಮಶೇಖರ, ಯಂಕಾರೆಡ್ಡಿ, ಪ್ರೌಢಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ರವಿಚಂದ್ರ ನಾಯ್ಕ ಸೇರಿದಂತೆ ವಿವಿಧ ಶಿಕ್ಷಕ ಸಂಘಗಳ ಪದಾಧಿಕಾರಿಗಳು ಹಾಗೂ ಶಿಕ್ಷಣ ಇಲಾಖೆಯ ಸಿಬ್ಬಂದಿ ನೂತನ ಅಧಿಕಾರಿಗಳನ್ನು ಅಭಿನಂದಿಸಿದರು.

ಹ್ಯಾಟಿ ಲೋಕಪ್ಪ, ಸಿದ್ದಲಿಂಗಯ್ಯ ಸ್ವಾಮಿ, ಬಿ. ಕೊಟ್ರಪ್ಪ, ಕೆ.ಬಿ. ದೀಪಿಕಾ, ಸುಧಾ, ಹೆಚ್. ಸುರೇಶ, ಮುನೀರ್ ಸಾಬ್, ಬಿ. ಚಂದ್ರಪ್ಪ, ಇಟಗಿ ಪ್ರಭಾಕರ, ಜ್ಞಾನೇಶ್ವರ, ಶಿವತನಯ, ಕೆ. ಮಲ್ಲಿಕಾರ್ಜುನ, ಕೆ. ಹುಸೇನ್ ಸಾಹೇಬ್, ರಂಗನಾಥ ಹವಲ್ದಾರ್, ಎಂ. ಬಸವರಾಜ, ಇಟಗಿ ಮಂಜುನಾಥ ಸೇರಿದಂತೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

### 500ಕ್ಕೂ ಹೆಚ್ಚು ಸಸಿ ನೆಟ್ಟು ಪರಿಸರ ಜಾಗೃತಿ

# ಡಿಕೆ ಶಿವಕುಮಾರ್ ಹುಟ್ಟುಹಬ್ಬಕ್ಕೆ ಹಸಿರು ಸ್ಪರ್ಶ!

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಯುವಕರು ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳ ಗೀಳಿನಿಂದ ಹೊರಬಂದು ಕ್ರೀಡೆಗಳತ್ತ ಹೆಚ್ಚು ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಕಾಂಗ್ರೆಸ್ ಮುಖಂಡ ಅಶೋಕ ಭೀಮನಾಯ್ಕ ಕರೆ ನೀಡಿದರು.

ತಾಲೂಕಿನ ತಂಬ್ರಹಳ್ಳಿಯಲ್ಲಿ ಆಯೋಜಿಸಿದ್ದ ತಾಲೂಕು ಮಟ್ಟದ ಕ್ರಿಕೆಟ್ ಟೂರ್ನಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಯುವಪೀಳಿಗೆ ಮೊಬೈಲ್ ವ್ಯಸನಕ್ಕೆ ಒಳಗಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆಗಳು ಮತ್ತು ಸಾಮಾಜಿಕ ಜವಾಬ್ದಾರಿ ಅಗತ್ಯವಾಗಿದೆ ಎಂದು ಹೇಳಿದರು.

ಕ್ರೀಡೆಗಳು ಕೇವಲ ಮನರಂಜನೆಗೆ ಸೀಮಿತವಲ್ಲ. ಅವು ಶಿಸ್ತು, ನಾಯಕತ್ವ, ಸಹನೆ ಹಾಗೂ ತಂಡ ಮನೋಭಾವ ಬೆಳೆಸುವ ಶಕ್ತಿಯನ್ನು ಹೊಂದಿವೆ. ಗ್ರಾಮೀಣ ಭಾಗದ ಪ್ರತಿಭಾವಂತ ಯುವಕರಿಗೆ ಸೂಕ್ತ ವೇದಿಕೆ ದೊರೆತರೆ ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.



ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಜನ್ಮದಿನದ ಅಂಗವಾಗಿ 500ಕ್ಕೂ ಹೆಚ್ಚು ವಿವಿಧ ಜಾತಿಯ ಸಸಿಗಳನ್ನು ನೆಟ್ಟು ಪರಿಸರ ಜಾಗೃತಿ ಮೂಡಿಸಲಾಯಿತು.

> "ಮೊಬೈಲ್ ಮತ್ತು ಸಾಮಾಜಿಕ ಜಾಲತಾಣಗಳ ಗೀಳಿನಿಂದ ಯುವಕರು ಹೊರಬಂದು ಕ್ರೀಡೆ ಹಾಗೂ ಸಮಾಜಮುಖಿ ಚಟುವಟಿಕೆಗಳತ್ತ ಹೆಚ್ಚು ಆಸಕ್ತಿ ಬೆಳೆಸಿಕೊಳ್ಳಬೇಕು."
>
> **- ಅಶೋಕ ಭೀಮನಾಯ್ಕ,** ಕಾಂಗ್ರೆಸ್ ಮುಖಂಡ

ರಾಜಕೀಯ ಆಚರಣೆಗಳು ಸಮಾಜಮುಖಿ ಕಾರ್ಯಗಳೊಂದಿಗೆ ನಡೆಯಬೇಕು ಎಂಬ ಸಂದೇಶವನ್ನು ಕಾರ್ಯಕ್ರಮದ ಮೂಲಕ ಸಾರಲಾಯಿತು.

ತಾಲೂಕಿನ ವಿವಿಧ ಗ್ರಾಮಗಳಿಂದ ಆಗಮಿಸಿದ್ದ 23 ತಂಡಗಳು ಕ್ರಿಕೆಟ್ ಟೂರ್ನಿಯಲ್ಲಿ ಭಾಗವಹಿಸಿದ್ದವು. ಇಂತಹ ಕ್ರೀಡಾಕೂಟಗಳು ಯುವಕರಲ್ಲಿ ಕ್ರೀಡಾಸಕ್ತಿ ಹೆಚ್ಚಿಸಲು ಪ್ರೇರಣೆಯಾಗುತ್ತವೆ ಎಂದು ಸಾರ್ವಜನಿಕರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಜಿಪಂ ಮಾಜಿ ಸದಸ್ಯ ಅಕ್ಕಿ ತೋಟೇಶ್, ಹಗರಿಬೊಮ್ಮನಹಳ್ಳಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೋರಿ ಗೋಣಿಬಸಪ್ಪ, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಅಧ್ಯಕ್ಷ ಸೊನ್ನದ ಗುರುಬಸವರಾಜ್, ಗೌರಜ್ಜನವರ ಗಿರೀಶ್, ಯಳಕಪ್ಪನವರ ಸುರೇಶ್, ಡಿಶ್ ಬಾಳಪ್ಪ, ಬಡಲಡಿಕಿ ನಾಗರಾಜ್, ರೆಡ್ಡಿ ಮಂಜುನಾಥ್ ಪಾಟೀಲ್ ಸೇರಿದಂತೆ ಅನೇಕ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

### ಕೌಶಲ್ಯಯುತ ಶಿಕ್ಷಣಕ್ಕೆ ಇಂದಿನ ಕಾಲದಲ್ಲಿ ಹೆಚ್ಚಿನ ಮಹತ್ವ: ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು

# ಮೊಬೈಲ್ ಬಿಟ್ಟು ಓದಿನತ್ತ ಗಮನ ಹರಿಸಿ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಂದಿನ ವಿಜ್ಞಾನ ಮತ್ತು ತಂತ್ರಜ್ಞಾನ ಯುಗದಲ್ಲಿ ಶಿಕ್ಷಣಕ್ಕೆ ಅಪಾರ ಮಹತ್ವವಿದ್ದು, ವಿದ್ಯಾರ್ಥಿಗಳು ಮೊಬೈಲ್ ಬಳಕೆಯಿಂದ ದೂರವಿದ್ದು ಓದಿನ ಕಡೆ ಹೆಚ್ಚು ಗಮನ ಹರಿಸಬೇಕು ಎಂದು ಹರ್ಲಾಪೂರ ಕೊಟ್ಟೂರೇಶ್ವರ ಮಠದ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು ಸಲಹೆ ನೀಡಿದರು.

ಲಕ್ಕುಂಡಿ ಸಮೀಪದ ಹರ್ಲಾಪೂರ ಕೊಟ್ಟೂರೇಶ್ವರ ಮಠದಲ್ಲಿ ನಡೆದ 318ನೇ ಶಿವಾನುಭವ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಇಂದಿನ ಎಲ್ಲ ಕ್ಷೇತ್ರಗಳಲ್ಲೂ ಕೌಶಲ್ಯಯುತ ಶಿಕ್ಷಣಕ್ಕೆ ಹೆಚ್ಚಿನ ಬೆಲೆ ಇದೆ. ಆದ್ದರಿಂದ ವಿದ್ಯಾರ್ಥಿಗಳು ಕೌಶಲ್ಯದೊಂದಿಗೆ ಶಿಕ್ಷಣವನ್ನು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಮಠ-ಮಂದಿರಗಳಲ್ಲಿ ನಡೆಯುವ ಶಿವಶರಣರ ಪುರಾಣ ಹಾಗೂ ಪುಣ್ಯಕಥೆಗಳಲ್ಲಿ ಅಡಕವಾಗಿರುವ ತತ್ವ, ಹಿತೋಪದೇಶಗಳು ವಿದ್ಯಾರ್ಥಿಗಳ ಜೀವನಕ್ಕೆ ದಾರಿದೀಪವಾಗುತ್ತವೆ. ಹೀಗಾಗಿ ವಿದ್ಯಾರ್ಥಿಗಳು ಇಂತಹ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಎಂದು ತಿಳಿಸಿದರು.

ಶ್ರೀಮಠದಲ್ಲಿ ಕಳೆದ 25 ವರ್ಷಗಳಿಂದ ಎಸ್ಎಸ್ಎಲ್‌ಸಿ, ಪಿಯುಸಿ ಸೇರಿದಂತೆ ವಿವಿಧ ಶಿಕ್ಷಣ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಗುರುತಿಸಿ ಸನ್ಮಾನಿಸುವ ಕಾರ್ಯ ನಡೆಯುತ್ತಿದ್ದು, ಇದು ಇತರೆ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗುತ್ತಿದೆ. ಪರಿಣಾಮವಾಗಿ ಹೆಚ್ಚಿನ ಅಂಕ ಗಳಿಸಲು ಸಾಧ್ಯವಾಗುತ್ತಿದೆ ಎಂದು ಅಭಿಪ್ರಾಯಪಟ್ಟರು.

ಹೇಮರೆಡ್ಡಿ ಮಲ್ಲಮ್ಮ, ಬಸವೇಶ್ವರ ಹಾಗೂ ವಿಶ್ವ ತಾಯಂದಿರ ಜಯಂತಿ ಅಂಗವಾಗಿ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿದ ಶ್ರೀಗಳು, ಸಾಧಕರ ಸಾಧನೆ ಹಾಗೂ ಸಮಾಜಮುಖಿ ಕಾರ್ಯಗಳ ಕುರಿತು ವಿವರಿಸಿದರು.

ಈ ಸಂದರ್ಭದಲ್ಲಿ ಎಸ್ಎಸ್ಎಲ್‌ಸಿಯಲ್ಲಿ ಹೆಚ್ಚು ಅಂಕ ಗಳಿಸಿದ ಭಾಗ್ಯಶ್ರೀ ಯಾಳವಾಡ, ನಿಕೀಲ್ ಕೋರಿ, ಭಾಗ್ಯಲಕ್ಷ್ಮೀ ಶಾನಭೋಗರ, ಜ್ಯೋತಿ ಮನ್ನಾಪೂರ, ಶಿವಶಾಂತ ಶಶಿಮಠ ಹಾಗೂ ಪೂರ್ಣಿಮಾ ಕಾಶಪ್ಪನವರ ಅವರನ್ನು ಸನ್ಮಾನಿಸಲಾಯಿತು.

ಕೆ.ಬಿ. ವೀರಾಪೂರ ಹಾಗೂ ನಾಗೇಂದ್ರ ಅರ್ಕಸಾಲಿ ಸಂಗೀತ ಸೇವೆ ನೀಡಿದರು. ಉಪನ್ಯಾಸಕ ವಿ.ಎಚ್. ಕೊಳ್ಳಿ, ಶರಣಪ್ಪಗೌಡ ಪಾಟೀಲ, ಸಿದ್ದು ಯಾಳವಾಡ, ಕೊಟ್ರಯ್ಯ ಮಜ್ಜಿಗುಡ್ಡ, ಕೊಟ್ರಗೌಡ ಕಾತರಕಿ, ಶರಣಪ್ಪ ದೇಸಾಯಿ, ದೇವೇಂದ್ರಪ್ಪ ಜಮಲಿಂಗಪ್ಪನವರ, ಕೆ.ಬಿ. ಕೊಣ್ಣೂರು, ಟಿ.ಡಿ. ಗವಾನಿ, ಪ್ರಕಾಶ ಹೊಸಮನಿ ಉಪಸ್ಥಿತರಿದ್ದರು.

ನಿವೃತ್ತ ಶಿಕ್ಷಕ ರಾಮಣ್ಣ ಬೆಳಧಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವೆಂಕಟೇಶ ಜುಂಜಣ್ಣಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ರಾಷ್ಟ್ರೀಯ ಕಾನೂನು ಉತ್ಸವದಲ್ಲಿ ಎಸ್.ಎ. ಮಾನ್ವಿ ಕಾಲೇಜಿಗೆ ಪ್ರಥಮ ಸ್ಥಾನ




■ವಿಜಯಸಾಕ್ಷಿ ಸುದ್ದಿ, ಗದಗ

ಬೆಳಗಾವಿಯ ಕೆಎಲ್ಇ ಸಂಸ್ಥೆಯ ಬಿ.ವಿ. ಬೆಲ್ಲದ ಕಾನೂನು ಕಾಲೇಜಿನಲ್ಲಿ ಆಯೋಜಿಸಿದ್ದ 3ನೇ ರಾಷ್ಟ್ರೀಯ ಕಾನೂನು ಉತ್ಸವ-2026ರಲ್ಲಿ ಗದಗದ ಕೆಎಲ್ಇ ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಕಾಲೇಜಿನ ವಿದ್ಯಾರ್ಥಿನಿಯರು ಪ್ರಥಮ ಸ್ಥಾನ ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಕಕ್ಷಿದಾರರ ಸಮಾಲೋಚನಾ ಸ್ಪರ್ಧೆಯಲ್ಲಿ ಕಾಲೇಜಿನ ದ್ವಿತೀಯ ವರ್ಷದ ವಿದ್ಯಾರ್ಥಿನಿಯರಾದ ಧ್ರುವಿ ಎಲ್. ಸಂಕಲೇಶ ಹಾಗೂ ಸ್ನೇಹಾ ಕಟ್ವಾ ಭಾಗವಹಿಸಿ ಅತ್ಯುತ್ತಮ ಪ್ರದರ್ಶನ ನೀಡಿ ಪ್ರಥಮ ಸ್ಥಾನ ಗಳಿಸಿದ್ದಾರೆ. ವಿದ್ಯಾರ್ಥಿನಿಯರ ಈ ಸಾಧನೆಯನ್ನು ಕಾಲೇಜಿನ ಪ್ರಾಚಾರ್ಯ ಡಾ. ಎಸ್.ಎಂ. ಹುಲ್ಲೂರ ಪ್ರಕಟಣೆಯಲ್ಲಿ ತಿಳಿಸಿ ಅಭಿನಂದಿಸಿದ್ದಾರೆ.

### ಗದಗದ ಒಣಭೂಮಿಗೆ ಗೋಡಂಬಿಯೇ ಸೂಕ್ತ ಬೆಳೆ..!

# ಗೋಡಂಬಿ ಬೆಳೆಯಲ್ಲಿದೆ ರೈತರ ಭವಿಷ್ಯ..!




> "ಗದಗ ಜಿಲ್ಲೆಯ ಒಣಬೇಸಾಯ ಪ್ರದೇಶಗಳಿಗೆ ಗೋಡಂಬಿ ಬೆಳೆಯ ವೆಂಗುರ್ಲಾ-4 ಹಾಗೂ ವೆಂಗುರ್ಲಾ-7 ತಳಿಗಳು ಅತ್ಯಂತ ಸೂಕ್ತ. ರೈತರು ಈ ತಳಿಗಳನ್ನು ಅಳವಡಿಸಿಕೊಂಡರೆ ಉತ್ತಮ ಆದಾಯ ಗಳಿಸಬಹುದು."
>
> **- ಸುರೇಶ್ ಕುಂಬಾರ,** ನಿವೃತ್ತ ಹಿರಿಯ ತೋಟಗಾರಿಕೆ ನಿರ್ದೇಶಕರು

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಒಣಬೇಸಾಯ ಪ್ರದೇಶಗಳಿಗೆ ಗೋಡಂಬಿ ಬೆಳೆ ಉತ್ತಮ ಪರ್ಯಾಯ ಬೆಳೆಯಾಗಿದ್ದು, ರೈತರು ವೈಜ್ಞಾನಿಕ ತಂತ್ರಜ್ಞಾನ ಅಳವಡಿಸಿಕೊಂಡರೆ ಹೆಚ್ಚಿನ ಲಾಭ ಗಳಿಸಬಹುದು ಎಂದು ತಜ್ಞರು ಅಭಿಪ್ರಾಯಪಟ್ಟರು.

ಐಸಿಎಆರ್ ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿಯಲ್ಲಿ ಗೋಡಂಬಿ ಮತ್ತು ಕೋಕೊ ಅಭಿವೃದ್ಧಿ ನಿರ್ದೇಶನಾಲಯ, ಕೋಚಿನ್ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಗೋಡಂಬಿ ಬೆಳೆ ವಿಚಾರ ಸಂಕಿರಣದಲ್ಲಿ ವಿವಿಧ ತಜ್ಞರು ರೈತರಿಗೆ ಮಾರ್ಗದರ್ಶನ ನೀಡಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ನಿವೃತ್ತ ಹಿರಿಯ ತೋಟಗಾರಿಕೆ ನಿರ್ದೇಶಕ ಸುರೇಶ್ ಕುಂಬಾರ ಮಾತನಾಡಿ, ಗದಗ ಜಿಲ್ಲೆಯಲ್ಲಿ ವಿವಿಧ ತೋಟಗಾರಿಕೆ ಬೆಳೆಗಳನ್ನು ಬೆಳೆಯಲಾಗುತ್ತಿದೆಯಾದರೂ, ಕಡಿಮೆ ಮಳೆ ಹಾಗೂ ಒಣಬೇಸಾಯ ಪರಿಸ್ಥಿತಿಗೆ ಗೋಡಂಬಿ ಬೆಳೆ ಸೂಕ್ತವಾಗಿದೆ ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಹಿರಿಯ ತೋಟಗಾರಿಕೆ ನಿರ್ದೇಶಕ ಶೈಲೇಂದ್ರ ಬಿರಾದಾರ ಮಾತನಾಡಿ, ಅಂತರಾಷ್ಟ್ರೀಯ ಮಾರುಕಟ್ಟೆಯಲ್ಲಿ ಗೋಡಂಬಿಗೆ ಹೆಚ್ಚಿನ ಬೇಡಿಕೆ ಇದ್ದು, ರೈತರು ಗುಣಮಟ್ಟದ ಉತ್ಪಾದನೆಗೆ ಒತ್ತು ನೀಡಬೇಕು ಎಂದರು.

ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ನಿವೃತ್ತ ವಿಜ್ಞಾನಿ ಎಸ್.ಕೆ. ಮುದ್ಲಾಪೂರ ಮಾತನಾಡಿ, ಗೋಡಂಬಿಯನ್ನು ಲಾಭದಾಯಕವಾಗಿ ಬೆಳೆಯುವ ವಿಧಾನಗಳ ಕುರಿತು ಮಾಹಿತಿ ನೀಡಿದರು. ಗದಗ ಜಿಲ್ಲೆಯಾದ್ಯಂತ ಗೋಡಂಬಿ ಬೆಳೆಯನ್ನು ಪರಿಚಯಿಸಿ ರೈತರಲ್ಲಿ ಜಾಗೃತಿ ಮೂಡಿಸಲು ಕೃಷಿ ವಿಜ್ಞಾನ ಕೇಂದ್ರ ಕೈಗೊಂಡಿರುವ ಕಾರ್ಯವನ್ನು ಶ್ಲಾಘಿಸಿದರು.

ಡಿ.ಜಿ.ಎಂ. ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ಡಾ. ಆರ್.ಕೆ. ಗಚ್ಚಿನಮಠ ಮಾತನಾಡಿ, "ವೃತ್ತಿಯಿಂದ ಆಯುರ್ವೇದಿಕ್ ಪ್ರಾಧ್ಯಾಪಕರಾದರೂ ಕೃಷಿ ನನ್ನನ್ನು ಆಕರ್ಷಿಸಿದೆ. ಗೋಡಂಬಿ ಬೆಳೆ ಒಣಬೇಸಾಯದ ಪ್ರಮುಖ ವಾಣಿಜ್ಯ ಬೆಳೆಯಾಗಿದೆ" ಎಂದು ಹೇಳಿದರು.

ಕೃಷಿ ವಿಜ್ಞಾನ ಕೇಂದ್ರದ ನಿವೃತ್ತ ಬೇಸಾಯ ಶಾಸ್ತ್ರ ವಿಜ್ಞಾನಿ ವಿ.ಡಿ. ವೈಕುಂಠ ತಮ್ಮ ಅನುಭವ ಹಂಚಿಕೊಂಡು, ಗೋಡಂಬಿ ಬೆಳೆ ವೈಜ್ಞಾನಿಕ ನಿರ್ವಹಣೆಯಿಂದ ಉತ್ತಮ ಆದಾಯ ಗಳಿಸಬಹುದು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿಜ್ಞಾನಿ (ಮಣ್ಣು ಶಾಸ್ತ್ರ) ಎನ್.ಎಚ್. ಭಂಡಿ ಮಾತನಾಡಿ, "ಗದಗ ಜಿಲ್ಲೆಯಲ್ಲಿ ಬೆಳೆಯುವ ಗೋಡಂಬಿ ಉತ್ತಮ ಗುಣಮಟ್ಟದ್ದಾಗಿದ್ದು, ರಫ್ತಿಗೆ ಯೋಗ್ಯವಾಗಿದೆ. ರೈತರು ಹೊಸ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡು ಹೆಚ್ಚಿನ ಲಾಭ ಪಡೆಯಬೇಕು" ಎಂದು ಸಲಹೆ ನೀಡಿದರು.

ತೋಟಗಾರಿಕೆ ವಿಜ್ಞಾನಿ ಹೇಮಾವತಿ ಹಿರೇಗೌಡರ ಮಾತನಾಡಿ, ಕಳೆದ ಹತ್ತು ವರ್ಷಗಳಿಂದ ಕೃಷಿ ವಿಜ್ಞಾನ ಕೇಂದ್ರವು ಗೋಡಂಬಿ ಬೆಳೆಯ ಕುರಿತು ರೈತರಿಗೆ ತಾಂತ್ರಿಕ ಮಾರ್ಗದರ್ಶನ ನೀಡುತ್ತಾ ಬಂದಿದೆ ಎಂದರು.

ಕಾರ್ಯಕ್ರಮದಲ್ಲಿ ಡಾ. ವಿನಾಯಕ ನಿರಂಜನ್ ಸ್ವಾಗತಿಸಿದರು. ಡಾ. ಮಂಜುಪ್ರಕಾಶ ಪಾಟೀಲ ನಿರೂಪಿಸಿದರು. ಡಾ. ಚೇತನ್ ಬಾಬು ಆರ್.ಟಿ ವಂದಿಸಿದರು.

ಹುಲಕೋಟಿಯ ಪ್ರಗತಿಪರ ರೈತರಾದ ಸಿದ್ದಪ್ಪ ಕರಿಕಟ್ಟಿ, ಎನ್.ಆರ್. ಹೊಸಳ್ಳಿ, ಕೆ.ವಿ. ಆದಪ್ಪಗೌಡರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಜಿಲ್ಲೆಯ ಸುಮಾರು 165ಕ್ಕೂ ಹೆಚ್ಚು ಗೋಡಂಬಿ ಬೆಳೆಗಾರರು ಹಾಗೂ ರೈತರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಉದ್ಘಾಟನಾ ಸಮಾರಂಭದ ಬಳಿಕ ಗೋಡಂಬಿ ಬೇಸಾಯ, ಕೀಟ ಹಾಗೂ ರೋಗ ನಿರ್ವಹಣೆ ಕುರಿತು ತಾಂತ್ರಿಕ ತರಬೇತಿ ಮತ್ತು ರೈತರೊಂದಿಗೆ ಗುಂಪು ಚರ್ಚೆ ನಡೆಯಿತು. ಬಳಿಕ ಗೋಡಂಬಿ ಪ್ರಾತ್ಯಕ್ಷಿಕೆ ತೋಟಗಳಿಗೆ ಕ್ಷೇತ್ರ ಭೇಟಿ ಆಯೋಜಿಸಲಾಯಿತು.

### ಕೃಷಿ ಪರಿಕರಗಳ ನಿಯಮ, ಮಾರ್ಗಸೂಚಿಗಳ ಕುರಿತು ಕಾರ್ಯಾಗಾರ

# ಗುಣಮಟ್ಟದ ಕೃಷಿ ಪರಿಕರ ಪೂರೈಕೆಗೆ ಜಾಗೃತಿ



■ವಿಜಯಸಾಕ್ಷಿ ಸುದ್ದಿ, ಗದಗ

ಕೃಷಿ ಪರಿಕರಗಳ ಗುಣಮಟ್ಟ ನಿಯಂತ್ರಣ ನಿಯಮಗಳು ಹಾಗೂ ಮಾರ್ಗಸೂಚಿಗಳ ಕುರಿತು ಒಂದು ದಿನದ ಕಾರ್ಯಾಗಾರವನ್ನು ಗದಗ ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ ಹಾಗೂ ಇಫ್ಕೋ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ಮಹಾತ್ಮಾ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಆಯೋಜಿಸಲಾಯಿತು.

ಕಾರ್ಯಾಗಾರದಲ್ಲಿ ಕೃಷಿ ಮತ್ತು ಸಂಬಂಧಿತ ಕಾನೂನುಗಳ ಕೇಂದ್ರದ ನಿರ್ದೇಶಕ ವೆಂಕಟರವಣಪ್ಪ ಮಾತನಾಡಿ, ಕೃಷಿ ಪರಿಕರಗಳ ಗುಣಮಟ್ಟ ಕಾಪಾಡುವ ಮಹತ್ವ, ಪರವಾನಿಗೆ ನಿಯಮಗಳು, ದಾಖಲೆ ನಿರ್ವಹಣೆ, ಕೃಷಿ ಪರಿಕರಗಳ ಸಂಗ್ರಹ ವಿಧಾನಗಳು, ಮಾರಾಟ ನಿಯಮಗಳು ಹಾಗೂ ಸರ್ಕಾರದ ವಿವಿಧ ಕಾಯ್ದೆ-ನಿಯಮಗಳ ಕುರಿತು ಸಮಗ್ರ ಮಾಹಿತಿ ನೀಡಿದರು.

ಬೀಜ ಅಧಿನಿಯಮ, ರಸಗೊಬ್ಬರ ನಿಯಂತ್ರಣ ಆದೇಶ (ಎಫ್‌ಸಿಒ), ಕೀಟನಾಶಕ ಅಧಿನಿಯಮ ಸೇರಿದಂತೆ ಇತರೆ ಸಂಬಂಧಿತ ನಿಯಮಗಳ ಬಗ್ಗೆ ವಿವರಿಸಿದ ಅವರು, ಕೃಷಿ ಪರಿಕರಗಳ ಮಾದರಿ ಸಂಗ್ರಹ, ಲೇಬಲ್ ನಿಯಮಗಳು, ಬಿಲ್ ನೀಡುವ ಕಡ್ಡಾಯತೆ ಹಾಗೂ ರೈತರಿಗೆ ಸರಿಯಾದ ಮಾರ್ಗದರ್ಶನ ನೀಡುವ ಅಗತ್ಯ ಕುರಿತು ವಿತರಕರಿಗೆ ಸಲಹೆ ನೀಡಿದರು.

ಇಫ್ಕೋ ಕ್ಷೇತ್ರಾಧಿಕಾರಿ ರಾಘವೇಂದ್ರ ಎನ್. ಅವರು ಇಫ್ಕೋ ಉತ್ಪನ್ನಗಳ ಕುರಿತು ಶ್ರವಣ-ದೃಶ್ಯ ಮಾಧ್ಯಮದ ಮೂಲಕ ಮಾಹಿತಿ ನೀಡಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಮಹಾತ್ಮಾ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಸಹಾಯಕ ನಿರ್ದೇಶಕ (ತರಬೇತಿ) ಡಾ. ಅಬ್ದುಲ್ ಅಜೀಜ್ ಮುಲ್ಲಾ ಕಾರ್ಯಕ್ರಮಕ್ಕೆ ಶುಭ ಹಾರೈಸಿದರು.

ಜಂಟಿ ಕೃಷಿ ನಿರ್ದೇಶಕಿ ಶ್ರೀಮತಿ ಚೇತನಾ ಪಾಟೀಲ ಮಾತನಾಡಿ, ಜಿಲ್ಲೆಯ ವಿವಿಧ ತಾಲೂಕುಗಳ ಕೃಷಿ ಪರಿಕರ ವಿತರಕರು ಹಾಗೂ ಕೃಷಿ ಇಲಾಖೆ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಿ ರೈತರಿಗೆ ಗುಣಮಟ್ಟದ ಪರಿಕರಗಳನ್ನು ಪೂರೈಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಯೂರಿಯಾ ವಿತರಣೆಗಾಗಿ ನವೀಕರಿಸಿದ ಕೆ-ಕಿಸಾನ್ ತಂತ್ರಾಂಶದ ಬಳಕೆ ಕುರಿತು ಕೃಷಿ ಅಧಿಕಾರಿ ಶ್ರೀಮತಿ ಚಿತ್ರಾ ತರಬೇತಿ ನೀಡಿದರು. ತಂತ್ರಾಂಶ ಬಳಕೆಗೆ ಸಂಬಂಧಿಸಿದಂತೆ ಮಾರಾಟಗಾರರು ಕೇಳಿದ ಪ್ರಶ್ನೆಗಳಿಗೆ ಪರಿಹಾರೋಪಾಯಗಳನ್ನು ವಿವರಿಸಲಾಯಿತು.

ಜಿಲ್ಲೆಯ ವಿವಿಧ ತಾಲೂಕುಗಳಿಂದ ಆಗಮಿಸಿದ್ದ ಸುಮಾರು 300 ಕೃಷಿ ಪರಿಕರ ವಿತರಕರು, ಕೃಷಿ ಅಧಿಕಾರಿಗಳು ಹಾಗೂ ಇಲಾಖೆಯ ಸಿಬ್ಬಂದಿ ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.

ಶ್ರೀಮತಿ ಸ್ಫೂರ್ತಿ ಜಿ.ಎಸ್. ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮುಂಡರಗಿ ಸಹಾಯಕ ಕೃಷಿ ನಿರ್ದೇಶಕರು ಕಾರ್ಯಕ್ರಮ ನಿರೂಪಿಸಿದರು.

# ಗದಗ ಪ್ರಯಾಣಿಕರಿಗೆ ರೈಲ್ವೆ ಇಲಾಖೆಯ ನಿರ್ಲಕ್ಷ್ಯ..?



■ವಿಜಯಸಾಕ್ಷಿ ಸುದ್ದಿ, ಗದಗ

ಯಶವಂತಪುರ–ವಿಜಯಪುರ ನಡುವೆ ಮೇ 17ರಿಂದ ಆರಂಭವಾಗಲಿರುವ ಬೇಸಿಗೆ ವಿಶೇಷ ರೈಲನ್ನು ಗದಗ ಜಂಕ್ಷನ್ ಬದಲಾಗಿ ಗದಗ ಬೈಪಾಸ್ ಮಾರ್ಗವಾಗಿ ಸಂಚರಿಸಲು ನಿರ್ಧರಿಸಿರುವುದಕ್ಕೆ ಗದಗ ಜಿಲ್ಲೆಯ ಸಾರ್ವಜನಿಕರು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಗದಗ ಬೈಪಾಸ್ ನಿಲ್ದಾಣವು ನಗರದಿಂದ ಹೊರವಲಯದಲ್ಲಿದ್ದು, ಅಲ್ಲಿಗೆ ತಲುಪಲು ಸಮರ್ಪಕ ರಸ್ತೆ ಹಾಗೂ ಸಾರ್ವಜನಿಕ ಸಾರಿಗೆ ವ್ಯವಸ್ಥೆಯ ಕೊರತೆಯಿದೆ. ಇದರಿಂದ ಜಿಲ್ಲೆಯ ಹಾಗೂ ಅಕ್ಕಪಕ್ಕದ ಜಿಲ್ಲೆಯ ಸಾವಿರಾರು ಪ್ರಯಾಣಿಕರು ತೊಂದರೆ ಅನುಭವಿಸಬೇಕಾಗುತ್ತದೆ ಎಂದು ಎಸ್‌ಡಿಪಿಐ ಜಿಲ್ಲಾಧ್ಯಕ್ಷ ಬಿಲಾಲ್ ಗೋಕಾವಿ ತಿಳಿಸಿದ್ದಾರೆ.

ವಿಶೇಷವಾಗಿ ವಿದ್ಯಾರ್ಥಿಗಳು, ಉದ್ಯೋಗಿಗಳು, ಮಹಿಳೆಯರು, ಹಿರಿಯ ನಾಗರಿಕರು ಹಾಗೂ ಗ್ರಾಮೀಣ ಭಾಗದ ಜನರಿಗೆ ಈ ನಿರ್ಧಾರದಿಂದ ಹೆಚ್ಚಿನ ಸಮಸ್ಯೆಯಾಗಲಿದೆ ಎಂದು ಅವರು ಹೇಳಿದ್ದಾರೆ. ಗದಗ ಜಂಕ್ಷನ್ ಉತ್ತರ ಕರ್ನಾಟಕದ ಪ್ರಮುಖ ರೈಲು ನಿಲ್ದಾಣವಾಗಿದ್ದು, ಜಿಲ್ಲೆಯ ಆರ್ಥಿಕ ಹಾಗೂ ಸಾಮಾಜಿಕ ಚಟುವಟಿಕೆಗಳಿಗೆ ಕೇಂದ್ರ ಬಿಂದುವಾಗಿದೆ. ವ್ಯಾಪಾರ, ಶಿಕ್ಷಣ, ಉದ್ಯೋಗ ಹಾಗೂ ಆರೋಗ್ಯ ಸೇವೆಗಳಿಗಾಗಿ ಪ್ರತಿದಿನ ಸಾವಿರಾರು ಜನರು ಈ ನಿಲ್ದಾಣವನ್ನು ಅವಲಂಬಿಸಿದ್ದಾರೆ. ಇಂತಹ ಸಂದರ್ಭದಲ್ಲಿ ಪ್ರಮುಖ ರೈಲುಗಳನ್ನು ಗದಗ ಜಂಕ್ಷನ್ ಬದಲಾಗಿ ಬೈಪಾಸ್ ಮೂಲಕ ಸಂಚರಿಸುವುದು ಜಿಲ್ಲೆಯ ಅಭಿವೃದ್ಧಿ ದೃಷ್ಟಿಯಿಂದಲೂ ಹಿನ್ನಡೆಯಾಗುವ ಸಾಧ್ಯತೆ ಇದೆ ಎಂದು ಸಾರ್ವಜನಿಕರು ಅಭಿಪ್ರಾಯಪಟ್ಟಿದ್ದಾರೆ.

ಆದ್ದರಿಂದ ಯಾವುದೇ ಪ್ಯಾಸೆಂಜರ್ ಅಥವಾ ವಿಶೇಷ ರೈಲುಗಳನ್ನು ಗದಗ ಬೈಪಾಸ್ ಮೂಲಕ ಸಂಚರಿಸದೇ, ಗದಗ ಜಂಕ್ಷನ್ ಮುಖ್ಯ ನಿಲ್ದಾಣದ ಮೂಲಕವೇ ಸಂಚರಿಸುವಂತೆ ನೈರುತ್ಯ ರೈಲ್ವೆ ವಲಯವು ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಜಿಲ್ಲೆಯ ಪ್ರಯಾಣಿಕರ ಅನುಕೂಲ, ಸಾರ್ವಜನಿಕ ಸುರಕ್ಷತೆ ಹಾಗೂ ಗದಗ ಜಿಲ್ಲೆಯ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಯ ದೃಷ್ಟಿಯಿಂದ ಹಾವೇರಿ–ಗದಗ ಸಂಸದರು, ಶಾಸಕರು, ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ರೈಲ್ವೆ ಇಲಾಖೆಯ ಅಧಿಕಾರಿಗಳು ತಕ್ಷಣ ಎಚ್ಚರಿಕೆ ವಹಿಸಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಎಸ್‌ಡಿಪಿಐ ಜಿಲ್ಲಾಧ್ಯಕ್ಷ ಬಿಲಾಲ್ ಗೋಕಾವಿ ಪತ್ರಿಕಾ ಪ್ರಕಟಣೆಯಲ್ಲಿ ಆಗ್ರಹಿಸಿದ್ದಾರೆ.

## ಲಕ್ಕುಂಡಿಗೆ 'ಹೆರಿಟೇಜ್ ಹಬ್' ಕನಸು..!

▶▶ಮೊದಲನೇ ಪುಟದಿಂದ

ನರಗುಂದ ಶಾಸಕ ಸಿ.ಸಿ. ಪಾಟೀಲ ಮಾತನಾಡಿ, "ಎರಡು ಸಾವಿರ ವರ್ಷಗಳ ಇತಿಹಾಸವನ್ನು ಹೊತ್ತಿರುವ ಲಕ್ಕುಂಡಿಯ ಪುರಾತತ್ವ ಸಂಪತ್ತು ಇಂದಿನ ಪೀಳಿಗೆಗೆ ಅಚ್ಚರಿಯ ಸಂಗತಿಯಾಗಿದೆ. ಆ ಕಾಲದ ಶಿಲ್ಪಿಗಳ ಪ್ರತಿಭೆ, ಕಲಾತ್ಮಕತೆ ಮತ್ತು ತಾಂತ್ರಿಕ ಸಾಮರ್ಥ್ಯಕ್ಕೆ ಇಲ್ಲಿ ದೊರೆಯುತ್ತಿರುವ ಶಿಲ್ಪಗಳು ಹಾಗೂ ಪುರಾವೆಗಳು ಜೀವಂತ ಸಾಕ್ಷಿಗಳಾಗಿವೆ" ಎಂದು ಹೇಳಿದರು. ಸಚಿವ ಎಚ್.ಕೆ. ಪಾಟೀಲರ ನೇತೃತ್ವದಲ್ಲಿ ನಡೆಯುತ್ತಿರುವ ಅನ್ವೇಷಣಾ ಕಾರ್ಯಗಳಿಂದ ಲಕ್ಕುಂಡಿಯ ಐತಿಹಾಸಿಕ ಮಹತ್ವ ಮತ್ತಷ್ಟು ಬೆಳಕಿಗೆ ಬರುತ್ತಿದೆ. ಈಗ ಪತ್ತೆಯಾಗಿರುವ ಪುರಾವೆಗಳು ಕೇವಲ ಆರಂಭ ಮಾತ್ರ. ಇನ್ನಷ್ಟು ಅನ್ವೇಷಣೆಗಳು ನಡೆದರೆ ಲಕ್ಕುಂಡಿಯ ಗತ ವೈಭವ ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಳ್ಳುವ ಸಾಧ್ಯತೆ ಇದೆ ಎಂದು ಅವರು ಅಭಿಪ್ರಾಯಪಟ್ಟರು.ಸಭೆಯಲ್ಲಿ ರಾಜ್ಯ ಮಟ್ಟದ ಸಲಹಾ ಸಮಿತಿ ಸದಸ್ಯರು ಲಕ್ಕುಂಡಿಯ ಅಭಿವೃದ್ಧಿಗೆ ಸಂಬಂಧಿಸಿದಂತೆ ವಿವಿಧ ಸಲಹೆಗಳು ಹಾಗೂ ಅಭಿಪ್ರಾಯಗಳನ್ನು ಮಂಡಿಸಿದರು. ಪಾರಂಪರಿಕ ತಾಣಗಳ ಸಂರಕ್ಷಣೆ, ಪ್ರವಾಸೋದ್ಯಮ ವಿಸ್ತರಣೆ, ಸ್ಥಳೀಯ ಕಲಾ ಪರಂಪರೆಯ ಉತ್ತೇಜನ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಬೇಕೆಂದು ಸದಸ್ಯರು ಅಭಿಪ್ರಾಯಪಟ್ಟರು.

ಸಭೆಯಲ್ಲಿ ರಾಜ್ಯ ಮಟ್ಟದ ಸಲಹಾ ಸಮಿತಿ ಸದಸ್ಯರಾದ ಸಿ.ಜಿ. ಬೆಟಸೂರಮಠ, ಸಿದ್ದಲಿಂಗೇಶ್ವರ ಎಚ್. ಪಾಟೀಲ, ಶ್ರೀಮತಿ ಗೀತಾಂಜಲಿ ರಾವ್, ಅ.ದ. ಕಟ್ಟಿಮನಿ, ಪ್ರವಾಸೋದ್ಯಮ ಇಲಾಖೆ ಕಾರ್ಯದರ್ಶಿ ಡಾ. ಕೆ.ವಿ. ತ್ರಿಲೋಕ್ ಚಂದ್ರ, ಪುರಾತತ್ವ, ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆ ಆಯುಕ್ತ ದೇವರಾಜ್ ಎ., ಲಕ್ಕುಂಡಿ ಪಾರಂಪರಿಕ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಡಾ. ಶರಣು ಗೋಗೇರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಮತದಾರರ ಪಟ್ಟಿಗೆ ಮೆಗಾ ಮ್ಯಾಪಿಂಗ್ ಅಭಿಯಾನ..!

▶▶ಮೊದಲನೇ ಪುಟದಿಂದ

ಮೇ 17–18 ಹಾಗೂ ಮೇ 23–24ರಂದು ಬೆಳಿಗ್ಗೆ 8ರಿಂದ ಸಂಜೆ 6ರವರೆಗೆ 71–ಧಾರವಾಡ, 72–ಹುಬ್ಬಳ್ಳಿ–ಧಾರವಾಡ ಪೂರ್ವ, 73–ಹುಬ್ಬಳ್ಳಿ–ಧಾರವಾಡ ಕೇಂದ್ರ ಹಾಗೂ 74–ಹುಬ್ಬಳ್ಳಿ–ಧಾರವಾಡ ಪಶ್ಚಿಮ ವಿಧಾನಸಭಾ ಕ್ಷೇತ್ರಗಳಲ್ಲಿ ಶೇ.80ಕ್ಕಿಂತ ಕಡಿಮೆ ಪ್ರಗತಿ ಸಾಧಿಸಿರುವ ಮತಗಟ್ಟೆಗಳಲ್ಲಿ ಮತಗಟ್ಟೆ ಅಧಿಕಾರಿಗಳು ಹಾಜರಿದ್ದು ಮ್ಯಾಪಿಂಗ್ ಮತ್ತು ಪ್ರೋಜೆನಿ ಕಾರ್ಯ ಕೈಗೊಳ್ಳಲಿದ್ದಾರೆ. ಸಾರ್ವಜನಿಕರು ತಮ್ಮ ಮತಗಟ್ಟೆಗಳಿಗೆ ಭೇಟಿ ನೀಡಿ ತಮ್ಮ ಹಾಗೂ ಕುಟುಂಬ ಸದಸ್ಯರ ಹೆಸರುಗಳು ಮ್ಯಾಪಿಂಗ್ ಮತ್ತು ಪ್ರೋಜೆನಿ ಆಗಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಆಗದೇ ಇದ್ದಲ್ಲಿ ಸ್ಥಳದಲ್ಲಿಯೇ ಮಾಡಿಸಿಕೊಳ್ಳುವಂತೆ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಮನವಿ ಮಾಡಿದ್ದಾರೆ.

### ಅಕ್ರಮಗಳಿಗೆ ಬ್ರೇಕ್ ಹಾಕಲು ಕಟ್ಟೆಚ್ಚರ: 7 ಕೇಂದ್ರಗಳಲ್ಲಿ 1905 ವಿದ್ಯಾರ್ಥಿಗಳ ಪರೀಕ್ಷೆ

# ಎಸ್‌ಎಸ್‌ಎಲ್‌ಸಿ ಪರೀಕ್ಷೆ–2ಕ್ಕೆ ಸಜ್ಜು..!

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಮೇ 18ರಿಂದ 25ರವರೆಗೆ ನಡೆಯಲಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2 ಅನ್ನು ಯಾವುದೇ ಲೋಪದೋಷಗಳಿಲ್ಲದೆ, ಅಚ್ಚುಕಟ್ಟಾಗಿ ಹಾಗೂ ಪಾರದರ್ಶಕವಾಗಿ ನಡೆಸಲು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್. ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2ರ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷೆಗಳಲ್ಲಿ ಯಾವುದೇ ಅಕ್ರಮ ಹಾಗೂ ಅವ್ಯವಹಾರಗಳು ನಡೆಯದಂತೆ ಕಟ್ಟುನಿಟ್ಟಿನ ನಿಗಾ ವಹಿಸಬೇಕು. ಜಿಲ್ಲೆಯ ಒಟ್ಟು 7 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷಾರ್ಥಿಗಳಿಗೆ ಕುಡಿಯುವ ನೀರು, ವಿದ್ಯುತ್ ಸೇರಿದಂತೆ ಎಲ್ಲಾ ಮೂಲಭೂತ ಸೌಲಭ್ಯಗಳು ಸಮರ್ಪಕವಾಗಿರುವಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.

ಪರೀಕ್ಷಾ ಅವಧಿಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತ ನಿಷೇಧಾಜ್ಞೆ ಜಾರಿಗೊಳಿಸಲಾಗಿದ್ದು, ಯಾವುದೇ ರೀತಿಯ ಲೋಪದೋಷಗಳು ಸಂಭವಿಸದಂತೆ ಅಧಿಕಾರಿಗಳು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ತಿಳಿಸಿದರು.



ಸಭೆಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ, ಪರೀಕ್ಷೆಗಳನ್ನು ಸುಗಮ ಹಾಗೂ ಪಾರದರ್ಶಕವಾಗಿ ನಡೆಸುವ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಜಿಲ್ಲಾ ನೋಡಲ್ ಅಧಿಕಾರಿ ಎಚ್.ಬಿ. ರಡ್ಡೇರ್, ಡಿವೈಪಿಸಿ ಎಂ.ಎಸ್. ಕಂಬಳಿ ಹಾಗೂ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು ಉಪಸ್ಥಿತರಿದ್ದರು.

ಜಿಲ್ಲೆಯಲ್ಲಿ ಮೇ 18ರಿಂದ 25ರವರೆಗೆ ನಡೆಯಲಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2ರಲ್ಲಿ ಒಟ್ಟು 1905 ಅಭ್ಯರ್ಥಿಗಳು ಭಾಗವಹಿಸಲಿದ್ದು, ಜಿಲ್ಲೆಯ 7 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ.

> "ಎಸ್‌ಎಸ್‌ಎಲ್‌ಸಿ ಪರೀಕ್ಷೆ–2 ಅನ್ನು ಯಾವುದೇ ಅಕ್ರಮಗಳಿಗೆ ಅವಕಾಶ ನೀಡದೇ, ಸಂಪೂರ್ಣ ಪಾರದರ್ಶಕ ಹಾಗೂ ವ್ಯವಸ್ಥಿತ ರೀತಿಯಲ್ಲಿ ನಡೆಸಲು ಎಲ್ಲ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು."
> **– ಡಾ. ದುರಗೇಶ್ ಕೆ.ಆರ್.**, ಅಪರ ಜಿಲ್ಲಾಧಿಕಾರಿ, ಗದಗ

### ಪರೀಕ್ಷಾ ವೇಳಾಪಟ್ಟಿ ಹೀಗಿದೆ

1. ಮೇ 18: ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.15ರವರೆಗೆ – ಪ್ರಥಮ ಭಾಷೆಗಳು: ಕನ್ನಡ, ತೆಲುಗು, ಹಿಂದಿ, ಮರಾಠಿ, ತಮಿಳು, ಉರ್ದು, ಇಂಗ್ಲೀಷ್, ಇಂಗ್ಲೀಷ್ (ಎನ್‌ಸಿಇಆರ್‌ಟಿ), ಸಂಸ್ಕೃತ
2. ಮೇ 19: ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.15ರವರೆಗೆ – ವಿಜ್ಞಾನ, ರಾಜ್ಯಶಾಸ್ತ್ರ, ಹಿಂದೂಸ್ತಾನಿ ಸಂಗೀತ, ಕರ್ನಾಟಕ ಸಂಗೀತ
3. ಮೇ 20: ಬೆಳಿಗ್ಗೆ 10 ರಿಂದ ಮಧ್ಯಾಹ್ನ 1ರವರೆಗೆ –ದ್ವಿತೀಯ ಭಾಷೆ: ಇಂಗ್ಲೀಷ್, ಕನ್ನಡ
4. ಮೇ 21: ಬೆಳಿಗ್ಗೆ 10 ರಿಂದ ಮಧ್ಯಾಹ್ನ 1ರವರೆಗೆ –ಗಣಿತ, ಸಮಾಜಶಾಸ್ತ್ರ
5. ಮೇ 22: ಬೆಳಿಗ್ಗೆ 10 ರಿಂದ ಮಧ್ಯಾಹ್ನ 1ರವರೆಗೆ – ತೃತೀಯ ಭಾಷೆಗಳು: ಹಿಂದಿ (ಎನ್‌ಸಿಇಆರ್‌ಟಿ), ಕನ್ನಡ, ಇಂಗ್ಲೀಷ್, ಅರೇಬಿಕ್, ಉರ್ದು, ಸಂಸ್ಕೃತ, ಕೊಂಕಣಿ, ತುಳು, ಮರಾಠಿ
6. ಮೇ. 22ರಂದು ಬೆಳಿಗ್ಗೆ 10ರಿಂದ ಮಧ್ಯಾಹ್ನ 12.15ರವರೆಗೆ ಎನ್‌ಎಸ್‌ಕ್ಯೂಎಫ್ ವಿಷಯಗಳಾದ ಮಾಹಿತಿ ತಂತ್ರಜ್ಞಾನ, ರಿಟೇಲ್, ಆಟೋಮೊಬೈಲ್, ಬ್ಯೂಟಿ ಆ್ಯಂಡ್ ವೆಲ್‌ನೆಸ್, ಅಪರೆಲ್ ಮೇಡ್‌ಅಪ್ಸ್ ಮತ್ತು ಹೋಮ್ ಫರ್ನಿಷಿಂಗ್, ಎಲೆಕ್ಟ್ರಾನಿಕ್ಸ್ ಮತ್ತು ಹಾರ್ಡ್‌ವೇರ್ ವಿಷಯಗಳ ಪರೀಕ್ಷೆ ನಡೆಯಲಿದೆ.
7. ಮೇ 23: ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.15ರವರೆಗೆ – ಸಮಾಜ ವಿಜ್ಞಾನ
8. ಮೇ 25: ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.15ರವರೆಗೆ ಜೆಟಿಎಸ್ ವಿಷಯಗಳಾದ ಎಲಿಮೆಂಟ್ಸ್ ಆಫ್ ಎಲೆಕ್ಟ್ರಿಕಲ್ ಇಂಜಿನಿಯರಿಂಗ್, ಎಲಿಮೆಂಟ್ಸ್ ಆಫ್ ಮೆಕ್ಯಾನಿಕಲ್ ಇಂಜಿನಿಯರಿಂಗ್, ಎಲಿಮೆಂಟ್ಸ್ ಆಫ್ ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್, ಪ್ರೋಗ್ರಾಮಿಂಗ್ ಇನ್ ANSI 'C', ಅರ್ಥಶಾಸ್ತ್ರ ಪರೀಕ್ಷೆಗಳು ನಡೆಯಲಿವೆ.

## ಮೇಜರ್ ಹುದ್ದೆ ಅಲಂಕರಿಸಿದ ಪ್ರಾ. ರಾಠೋಡ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿದ್ಯಾದಾನ ಸಮಿತಿಯ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರು ಹಾಗೂ ಹಿರಿಯ ಎನ್‌ಸಿಸಿ ಅಧಿಕಾರಿಯಾಗಿರುವ ಪ್ರಾ. ಡಾ. ಬಿ.ಎಸ್. ರಾಠೋಡ ಅವರು ಇತ್ತೀಚೆಗೆ ಮೇಜರ್ ಹುದ್ದೆ ಅಲಂಕರಿಸಿ ಶಿಕ್ಷಣ ಹಾಗೂ ಎನ್‌ಸಿಸಿ ವಲಯದಲ್ಲಿ ಗಮನ ಸೆಳೆದಿದ್ದಾರೆ.

ಗದುಗಿನ 38ನೇ ಬಟಾಲಿಯನ್‌ನಲ್ಲಿ ನಡೆದ ಪದಗ್ರಹಣ ಸಮಾರಂಭದಲ್ಲಿ ಕಮಾಂಡಿಂಗ್ ಆಫೀಸರ್ ಕರ್ನಲ್ ಭುವನ್ ಖರೆ ಅವರು ಡಾ. ಬಿ.ಎಸ್. ರಾಠೋಡ ಅವರಿಗೆ ಮೇಜರ್ ಹುದ್ದೆಯ ಪದ ರ‍್ಯಾಂಕ್ ಹಾಗೂ ಲಾಂಛನ ತೊಡಿಸಿ ಗೌರವಿಸಿ ಅಭಿನಂದಿಸಿದರು.



ಈ ಸಂದರ್ಭದಲ್ಲಿ ವಿದ್ಯಾದಾನ ಸಮಿತಿಯ ಅಧ್ಯಕ್ಷ ಶ್ರೀನಿವಾಸ ಹುಯಿಲಗೋಳ, ಪ್ರಾ. ಎಂ.ಸಿ. ಕಟ್ಟಿಮನಿ, ಸುಬೇದಾರ ಮೇಜರ್ ಬಾಲು ಥರೋಟ್, ಎನ್‌ಸಿಸಿ ಅಧಿಕಾರಿಗಳು, ಜಿ.ಸಿ.ಓ., ಪಿ.ಎ. ಸ್ಟಾಫ್ ಹಾಗೂ 38ನೇ ಬಟಾಲಿಯನ್ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದು, ಮೇಜರ್ ಡಾ. ಬಿ.ಎಸ್. ರಾಠೋಡ ಅವರಿಗೆ ಶುಭಾಶಯ ಕೋರಿದರು.

ಎನ್‌ಸಿಸಿ ಕ್ಷೇತ್ರದಲ್ಲಿ ಅವರ ದೀರ್ಘಕಾಲದ ಸೇವೆ, ಶಿಸ್ತಿನ ಕಾರ್ಯವೈಖರಿ ಹಾಗೂ ವಿದ್ಯಾರ್ಥಿಗಳಲ್ಲಿ ರಾಷ್ಟ್ರಭಕ್ತಿ ಬೆಳೆಸುವ ಕಾರ್ಯಕ್ಕೆ ಈ ಗೌರವ ಮತ್ತೊಂದು ಮೆಟ್ಟಿಲಾಗಿದೆ.

## ನಾಳೆ ಜೆಡಿಎಸ್‌ನಿಂದ ದೇವೇಗೌಡರ ಜನ್ಮ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ



ಮಾಜಿ ಪ್ರಧಾನಿಗಳು, ರಾಜ್ಯಸಭಾ ಸದಸ್ಯರು ಹಾಗೂ ಜೆಡಿಎಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ಎಚ್.ಡಿ. ದೇವೇಗೌಡರ ಹುಟ್ಟುಹಬ್ಬವನ್ನು ಮೇ 18ರಂದು ಜಿಲ್ಲೆಯಲ್ಲಿ ವಿವಿಧ ಸಾಮಾಜಿಕ ಹಾಗೂ ಧಾರ್ಮಿಕ ಕಾರ್ಯಕ್ರಮಗಳ ಮೂಲಕ ಆಚರಿಸಲಾಗುತ್ತಿದೆ.

ಬೆಳಿಗ್ಗೆ 9.30ಕ್ಕೆ ನಡೆದಾಡುವ ದೇವರು ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳ ಪುಣ್ಯಾಶ್ರಮದಲ್ಲಿ ಜೆಡಿಎಸ್ ಗದಗ ಜಿಲ್ಲಾಧ್ಯಕ್ಷ ಎಂ.ವೈ. ಮುಧೋಳ ಅವರ ನೇತೃತ್ವದಲ್ಲಿ ವಿಶೇಷ ಪೂಜೆ ಹಾಗೂ ಅಭಿಷೇಕ ನೆರವೇರಿಸಲಾಗುವುದು. ಬಳಿಕ ಭಕ್ತಾದಿಗಳಿಗೆ ಪ್ರಸಾದ ವಿತರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುತ್ತದೆ.

ನಂತರ ಬೆಳಿಗ್ಗೆ 10.30ಕ್ಕೆ ಬಿಂಕದಕಟ್ಟಿ ಗ್ರಾಮದ ಸಾಲುಮರದ ತಿಮ್ಮಕ್ಕ ಉದ್ಯಾನವನದಲ್ಲಿ ಸಸಿ ನೆಡುವ ಕಾರ್ಯಕ್ರಮ ಹಾಗೂ ಕೇಕ್ ಕತ್ತರಿಸುವ ಮೂಲಕ ದೇವೇಗೌಡರ ಹುಟ್ಟುಹಬ್ಬವನ್ನು ಆಚರಿಸಲಾಗುವುದು.

ಕಾರ್ಯಕ್ರಮದಲ್ಲಿ ವಿಶೇಷ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಹಾಗೂ ಉಸಿರು ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷ ಶರಣು ಪಾಟೀಲ ಭಾಗವಹಿಸಲಿದ್ದಾರೆ.

ಮಧ್ಯಾಹ್ನ 2.30ಕ್ಕೆ ಶಿರಹಟ್ಟಿ ತಾಲೂಕು ಕಾರ್ಯಾಲಯದ ವತಿಯಿಂದ ರೈತರಿಗೆ ಸನ್ಮಾನ, ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿ–ವಿದ್ಯಾರ್ಥಿನಿಯರಿಗೆ ಪ್ರೋತ್ಸಾಹ ಧನ ವಿತರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಪಕ್ಷದ ಎಲ್ಲಾ ಪದಾಧಿಕಾರಿಗಳು, ಮುಖಂಡರು, ಅಭಿಮಾನಿಗಳು ಹಾಗೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಾಜಿಅಲಿ ಎಚ್. ಕೊಪ್ಪಳ ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ಲಕ್ಷ್ಮೇಶ್ವರ ಫಿಕಾರ್ಡ್ ಬ್ಯಾಂಕ್‌ಗೆ ಗುರಪ್ಪ ವಡ್ಡರ ಅವಿರೋಧ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದಿ ಲಕ್ಷ್ಮೇಶ್ವರ ಪ್ರಾಥಮಿಕ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿ., ಲಕ್ಷ್ಮೇಶ್ವರ ಇದರ ಗೊಜನೂರು–05 ಮತಕ್ಷೇತ್ರದ ಪರಿಶಿಷ್ಟ ಜಾತಿಗೆ ಮೀಸಲಿಟ್ಟ ಆಡಳಿತ ಮಂಡಳಿಯ ನಿರ್ದೇಶಕರ ಸ್ಥಾನಕ್ಕೆ ಗುರಪ್ಪ ಲಕ್ಷ್ಮಣ ವಡ್ಡರ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಗಮನಾರ್ಹವಾಗಿ, 2024ರ ಡಿಸೆಂಬರ್ 15ರಂದು ನಡೆಯಬೇಕಿದ್ದ ಗೊಜನೂರು–05 ಮತಕ್ಷೇತ್ರದ ಚುನಾವಣೆಯು ಆಕ್ಷೇಪಣೆ ಹಿನ್ನೆಲೆಯಲ್ಲಿ ನ್ಯಾಯಾಲಯದ ಮೆಟ್ಟಿಲೇರಿತ್ತು.



ಪ್ರಕರಣಕ್ಕೆ ಸಂಬಂಧಿಸಿದ ದಾಖಲಾತಿಗಳು, ಕಾಯ್ದೆ ಹಾಗೂ ನಿಯಮಾವಳಿಗಳನ್ನು ಸಮಗ್ರವಾಗಿ ಪರಿಶೀಲಿಸಿದ ನ್ಯಾಯಾಲಯ, ಗುರಪ್ಪ ಲಕ್ಷ್ಮಣ ವಡ್ಡರ ಅವರು ಸಲ್ಲಿಸಿದ್ದ ಏಕೈಕ ನಾಮಪತ್ರವನ್ನು ಸಿಂಧುಗೊಳಿಸಿ ಅಂತಿಮ ಆದೇಶ ಹೊರಡಿಸಿತ್ತು.

ನ್ಯಾಯಾಲಯದ ಆದೇಶದ ಅನ್ವಯ ಚುನಾವಣಾಧಿಕಾರಿಗಳು ಶನಿವಾರ ಗುರಪ್ಪ ಲಕ್ಷ್ಮಣ ವಡ್ಡರ ಅವರಿಗೆ ಆಯ್ಕೆ ಪ್ರಮಾಣಪತ್ರ ವಿತರಿಸಿದರು.

ಈ ಸಂದರ್ಭದಲ್ಲಿ ಬಿ.ಎಸ್. ಜಾಲಗಾರ, ನೀಲಪ್ಪ ಹತ್ತಿ, ಗಂಗಾಧರ ಮೆಣಸಿನಕಾಯಿ ಸೇರಿದಂತೆ ಬ್ಯಾಂಕಿನ ನಿರ್ದೇಶಕರು, ಚುನಾವಣಾಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

### ಶ್ರದ್ಧಾ ಸ್ವರ ಟ್ರಸ್ಟ್‌ನ 4ನೇ ಸಂಗೀತ ನೃತ್ಯ ಮಹೋತ್ಸವ ಅದ್ದೂರಿ ಯಶಸ್ಸು

# ಸಂಗೀತ–ನೃತ್ಯದ ರಂಗಿನಲ್ಲಿ ಮಿಂದೆದ್ದ ಪ್ರೇಕ್ಷಕರು..!

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರದ್ಧಾ ಸ್ವರ ಸಂಗೀತ ವೆಲ್ಫೇರ್ ಟ್ರಸ್ಟ್ (ರಿ), ಗದಗ ವತಿಯಿಂದ ಆಯೋಜಿಸಲಾದ 4ನೇ ಸಂಗೀತ ನೃತ್ಯ ಮಹೋತ್ಸವ ಬುಧವಾರ ನಗರದ ಭಾರತ ರತ್ನ ಪಂಡಿತ್ ಭೀಮಸೇನ್ ಜೋಶಿ ರಂಗಮಂದಿರದಲ್ಲಿ ಅದ್ದೂರಿಯಾಗಿ ಹಾಗೂ ಯಶಸ್ವಿಯಾಗಿ ಜರುಗಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಇಂತಹ ಸಾಂಸ್ಕೃತಿಕ ಕಾರ್ಯಕ್ರಮಗಳು ನಮ್ಮ ದೇಶದ ಪರಂಪರೆ ಮತ್ತು ಕಲೆಯನ್ನು ಉಳಿಸುವ ಕಾರ್ಯ ಮಾಡುತ್ತಿವೆ ಎಂದು ಅಭಿಪ್ರಾಯಪಟ್ಟರು.

"ನಮ್ಮ ದೇಶದ ಸಂಸ್ಕೃತಿ ಮತ್ತು ಪಾರಂಪರಿಕ ಕಲಾ ಕಾರ್ಯಕ್ರಮಗಳು ನಶಿಸುತ್ತಿರುವ ಈ ಸಂದರ್ಭದಲ್ಲಿ, ಇಂತಹ ಕಾರ್ಯಕ್ರಮಗಳು ಅವುಗಳಿಗೆ ಪುನರ್ಜನ್ಮ ನೀಡುವಂತಿವೆ" ಎಂದು ಹೇಳಿದರು.

ದಿವ್ಯಸಾನಿಧ್ಯ ವಹಿಸಿದ್ದ ಶ್ರೀ ಕಲ್ಲಯ್ಯಜ್ಜನವರು ಆಶೀರ್ವಚನ ನೀಡಿ, ಹಿಂದೂಸ್ತಾನಿ ಸಂಗೀತದ ಮಹತ್ವವನ್ನು ವಿವರಿಸಿದರು. ಸಂಸ್ಥೆಯ ಮಕ್ಕಳು ಉತ್ತಮ ಗಾಯಕರಾಗಿ ಬೆಳೆದು, ಸಂಗೀತ ಮತ್ತು ಕಲಾತ್ಮಕ ಚಟುವಟಿಕೆಗಳಲ್ಲಿ ಮುಂದುವರೆಯಲಿ ಎಂದು ಹಾರೈಸಿದರು.

ಮುಖ್ಯ ಅತಿಥಿಗಳಾದ ರೇಣುಕಾ ಪಾಟೀಲ ಕಾರ್ಯಕ್ರಮವನ್ನು ಮೆಚ್ಚಿ, ಉಸಿರು ಫೌಂಡೇಶನ್ ಸದಾ ಸಂಸ್ಥೆಯೊಂದಿಗೆ ಕೈಜೋಡಿಸಲಿದೆ ಎಂದು ತಿಳಿಸಿದರು.

ನಿಂಗೂ ಹುಣಸಿಮರದವರು ವಿಡಿಯೋ ಹಾಗೂ ಫೋಟೋ ಚಿತ್ರೀಕರಣದ ಮೂಲಕ ಸಹಕಾರ ನೀಡಿದರು. ಸಾಹಿತಿ ಡಾ. ನಿಂಗೂ ಸೊಲಗಿ ಮಾತನಾಡಿ, ಮಕ್ಕಳ ಪ್ರತಿಭೆ ಗುರುತಿಸಲು ಈ ಕಾರ್ಯಕ್ರಮ ಉತ್ತಮ ವೇದಿಕೆಯಾಗಿದೆ ಎಂದು ಹೇಳಿದರು.




ಇಮಾಮಸಾಬ ಮೊರಬದ್ ಹಾಗೂ ಮಾಬುಸಾಬ್ ಸಿದ್ದಿ ಸಂಸ್ಥೆಯ ಶ್ರಮವನ್ನು ಶ್ಲಾಘಿಸಿ, ಮುಂದೆಯೂ ಸಹಕಾರ ನೀಡುವುದಾಗಿ ತಿಳಿಸಿದರು.

ಎಂ.ಎಸ್. ಚಿನ್ನೂರ ಮಾತನಾಡಿ, ಯಕ್ಷಗಾನ ಹಾಗೂ ಅಯ್ಯಪ್ಪ ಸ್ವಾಮಿಯ ಕಥಾಭರಿತ ನೃತ್ಯ ಅತ್ಯಂತ ಮನಮುಟ್ಟುವಂತಿತ್ತು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ವಸಂತ ಹಲಗಿ ಮತ್ತು ರಾಜ ಕರಣ ಅವರು ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಪಾಠಶಾಲೆಯ ಮಕ್ಕಳಿಂದ ಸಂಗೀತ ಹಾಗೂ ಸಂತೋಷ ಅಸುಂಡಿ ಅವರ ನಿರ್ದೇಶನದಲ್ಲಿ ನೃತ್ಯ ಪ್ರದರ್ಶನಗಳು ನಡೆದವು. ಅಯ್ಯಪ್ಪ ಸ್ವಾಮಿಯ ಜೀವನಚರಿತ್ರೆಯ ಕುರಿತ ವಿಷಯಾಧಾರಿತ ನೃತ್ಯ ಎಲ್ಲರ ಮನಸೆಳೆಯಿತು.

> "ಇಂತಹ ಸಾಂಸ್ಕೃತಿಕ ಕಾರ್ಯಕ್ರಮಗಳು ನಮ್ಮ ದೇಶದ ಪರಂಪರೆ ಮತ್ತು ಕಲೆಯನ್ನು ಉಳಿಸಿ ಬೆಳೆಸುವ ಕೆಲಸ ಮಾಡುತ್ತಿವೆ."
> **– ಎಸ್.ವಿ. ಸಂಕನೂರ,** ವಿಧಾನ ಪರಿಷತ್ ಸದಸ್ಯರು

ಭರತನಾಟ್ಯ ಶಿಕ್ಷಕಿ ವರ್ಷಾ ಕಲಕಂಬಿ ಅವರ ನೇತೃತ್ವದಲ್ಲಿ ನಡೆದ ಯಕ್ಷಗಾನ ಪ್ರದರ್ಶನದಲ್ಲಿ ಶ್ರದ್ಧಾ ಕಬಾಡಿ ಹಾಗೂ ವರ್ಷಾ ಕಲಕಂಬಿ ಕೈಯಲ್ಲಿ ಮಶಾಲ್ ಹಿಡಿದು ಅದ್ಭುತ ಪ್ರದರ್ಶನ ನೀಡಿ ಪ್ರೇಕ್ಷಕರಲ್ಲಿ ಅಚ್ಚರಿ ಮೂಡಿಸಿದರು.


ಮಕ್ಕಳು ಭರತನಾಟ್ಯವನ್ನು ಮನೋಜ್ಞವಾಗಿ ಪ್ರದರ್ಶಿಸಿದರೆ, ಸಂಗೊಳ್ಳಿ ರಾಯಣ್ಣ ಅವರ ಜೀವನಚರಿತ್ರೆಯ ಕುರಿತ ಕಿರು ನಾಟಕ ಭಾವಪೂರ್ಣವಾಗಿ ಮೂಡಿಬಂದು ಪ್ರೇಕ್ಷಕರ ಕಣ್ಣಲ್ಲಿ ನೀರು ತರಿಸಿತು.

ಅತಿಥಿ ಗಾಯಕರಾಗಿ ಹಿಂದೂಸ್ತಾನಿ ಸಂಗೀತ ಗಾಯಕರಾದ ರಾಮು ಕೊಡೇಕಲ್ ರಾಗ ಮುಲ್ತಾನಿ ಹಾಡಿದರೆ, ವಿಶೇಷ ಚೇತನ ಗಾಯಕರಾದ ನಿಂಗರಾಜ ಎಲಿಗಾರ ರಾಗ ಗಾವತಿ ಹಾಡಿ ಕಾರ್ಯಕ್ರಮಕ್ಕೆ ವಿಶೇಷ ಕಳೆ ತಂದರು. ಪಾಠಶಾಲೆಯ ಅನೇಕ ಮಕ್ಕಳು ಸಹ ಹಾಡುಗಳನ್ನು ಹಾಡಿ ತಮ್ಮ ಪ್ರತಿಭೆ ಪ್ರದರ್ಶಿಸಿದರು.

ಕಾರ್ಯಕ್ರಮದಲ್ಲಿ ಗಣ್ಯರು, ಮಕ್ಕಳು, ಪಾಲಕರು, ಸಂಸ್ಥೆಯ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು ಎಂದು ಸಂಸ್ಥೆಯ ಅಧ್ಯಕ್ಷೆ ಜ್ಯೋತಿ ಉಜ್ವಲ್ ಕಬಾಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಲೆ ಏರಿಕೆ ಬರೆ: ಕೇಂದ್ರ ಸರ್ಕಾರ ವಿರುದ್ಧ ತಾರಾಸಿಂಗ್ ಕಿಡಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ



ದೇಶದಾದ್ಯಂತ ಪೆಟ್ರೋಲ್ ಮತ್ತು ಡೀಸೆಲ್ ದರವನ್ನು ಪ್ರತಿ ಲೀಟರ್‌ಗೆ ₹3ರಷ್ಟು, ಸಿಎನ್‌ಜಿ ದರವನ್ನು ₹3ರಷ್ಟು ಹಾಗೂ ಅಡುಗೆ ಅನಿಲ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿರುವ ಕೇಂದ್ರ ಸರ್ಕಾರದ ಕ್ರಮವನ್ನು ಗಜೇಂದ್ರಗಡ ತಾಲ್ಲೂಕಿನ ಬಂಜಾರ ಸಮಾಜದ ಹಿರಿಯ ಮುಖಂಡ ತಾರಾಸಿಂಗ್ ರಾಠೋಡ ತೀವ್ರವಾಗಿ ಖಂಡಿಸಿದ್ದಾರೆ.

ಈ ಕುರಿತು ಶನಿವಾರ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಜಾಗತಿಕ ಮಟ್ಟದಲ್ಲಿ ಕಚ್ಚಾ ತೈಲದ ಬೆಲೆ ಇಳಿಕೆಯಾಗಿದ್ದರೂ ಅದರ ಲಾಭವನ್ನು ಸಾಮಾನ್ಯ ಗ್ರಾಹಕರಿಗೆ ನೀಡದೇ ಕೇಂದ್ರ ಸರ್ಕಾರ ಜನರನ್ನು ಶೋಷಿಸುತ್ತಿದೆ ಎಂದು ಆರೋಪಿಸಿದರು.

2014ಕ್ಕೂ ಮೊದಲು ₹413 ಇದ್ದ ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್ ದರ ಈಗ ₹1,000 ದಾಟಿದ್ದು, ಇದರಿಂದ ನಿತ್ಯದ ಬೆಲೆ ಏರಿಕೆಗೆ ಕಾರಣವಾಗಿ ಜನಜೀವನ ಅಸ್ತವ್ಯಸ್ತಗೊಂಡಿದೆ ಎಂದು ದೂರಿದರು.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಅಂತರರಾಷ್ಟ್ರೀಯ ಬಿಕ್ಕಟ್ಟುಗಳನ್ನು ನಿಭಾಯಿಸುವಲ್ಲಿ ವಿಫಲವಾಗಿದೆ. ಚುನಾವಣೆಗಳು ಮುಗಿದ ತಕ್ಷಣವೇ ಜನರ ಮೇಲೆ ಬೆಲೆ ಏರಿಕೆಯ ಬರೆ ಹಾಕಲಾಗುತ್ತಿದೆ ಎಂದು ಟೀಕಿಸಿದರು.

ವಿವಿಧ ರಾಜ್ಯಗಳ ವಿಧಾನಸಭಾ ಚುನಾವಣೆಗಳ ಬಳಿಕ ದರ ಏರಿಕೆ ಮಾಡುವ ಸಾಧ್ಯತೆ ಇತ್ತು ಎಂಬ ಜನರ ಆತಂಕ ಈಗ ನಿಜವಾಗಿದೆ. ಮೋದಿ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಹಲವು ಬಾರಿ ತೈಲ ದರ ಏರಿಕೆ ಮಾಡಿದ್ದು, ಈಗಾಗಲೇ ಹಣದುಬ್ಬರ ಮತ್ತು ಹೆಚ್ಚುತ್ತಿರುವ ಜೀವನ ವೆಚ್ಚದಿಂದ ಬಳಲುತ್ತಿರುವ ಜನರ ಮೇಲೆ ಮತ್ತಷ್ಟು ಆರ್ಥಿಕ ಒತ್ತಡ ಹೇರುತ್ತಿದೆ ಎಂದು ಆರೋಪಿಸಿದರು.

ಎಲ್‌ಪಿಜಿ ಸಿಲಿಂಡರ್ ಪೂರೈಕೆಯ ವ್ಯತ್ಯಯದಿಂದ ಸಂಕಷ್ಟ ಅನುಭವಿಸುತ್ತಿರುವ ಜನರಿಗೆ ಈ ಬೆಲೆ ಏರಿಕೆ ಮತ್ತಷ್ಟು ಹೊರೆ ಆಗಲಿದೆ. ಬಂಗಾರದ ಮೇಲಿನ ತೆರಿಗೆ ಹೆಚ್ಚಳವೂ ಜನಸಾಮಾನ್ಯರ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಹೇಳಿದರು.

ಕಾರ್ಮಿಕರು, ರೈತರು, ಬಡವರು ಹಾಗೂ ಮಧ್ಯಮ ವರ್ಗದ ಕುಟುಂಬಗಳ ಬದುಕು ದಿನದಿಂದ ದಿನಕ್ಕೆ ದುಸ್ತರವಾಗುತ್ತಿದ್ದು, ಕೇಂದ್ರ ಸರ್ಕಾರ ಕೂಡಲೇ ಬೆಲೆ ಏರಿಕೆ ಹಿಂಪಡೆದು ಜನಸಾಮಾನ್ಯರ ಬದುಕಿಗೆ ಅನುಕೂಲ ಮಾಡಿಕೊಡಬೇಕು ಎಂದು ಆಗ್ರಹಿಸಿದರು.

ಬೆಲೆ ಏರಿಕೆ ಹಿಂಪಡೆಯದಿದ್ದರೆ ದೇಶಾದ್ಯಂತ ಜನರು ಕೇಂದ್ರ ಸರ್ಕಾರದ ವಿರುದ್ಧ ಹೋರಾಟಕ್ಕೆ ಮುಂದಾಗುವ ಪರಿಸ್ಥಿತಿ ನಿರ್ಮಾಣವಾಗಬಹುದು ಎಂದು ಅವರು ಎಚ್ಚರಿಸಿದರು.

## ಶರಣ ಸಂಗಮ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಬಸವಾದಿ ಶರಣರ ವಚನ ಸಾಹಿತ್ಯ ಜಾಗೃತಿ ಮತ್ತು ರಕ್ಷಣೆ ಇಂದಿನ ಅಗತ್ಯ ಎಂಬ ವಿಷಯದ ಕುರಿತು ಬಸವದಳದ ವತಿಯಿಂದ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ನಗರದ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಮೇ 17ರಂದು ಬೆಳಿಗ್ಗೆ 10 ಗಂಟೆಗೆ ನಡೆಯಲಿರುವ ಬಸವದಳದ 1698ನೇ ಶರಣ ಸಂಗಮ ಕಾರ್ಯಕ್ರಮದಲ್ಲಿ ಈ ಉಪನ್ಯಾಸ ಜರುಗಲಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಸವದಳ ಗದಗ-ಬೆಟಗೇರಿಯ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸಲಿದ್ದಾರೆ.

ಶರಣ ತತ್ವ ಚಿಂತಕಿ ಶರಣೆ ಶಾಂತಲಾ ಹಂಚಿನಾಳ ಉಪನ್ಯಾಸ ನೀಡಲಿದ್ದು, ಶರಣ ತತ್ವ ಚಿಂತಕಿ ಶರಣೆ ನಿರ್ಮಲಾ ಪಾಟೀಲ ಅತಿಥಿಯಾಗಿ ಭಾಗವಹಿಸಲಿದ್ದಾರೆ.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿ ವಿನಂತಿಸಿದ್ದಾರೆ.

### ಗದಗ ಮೇನ್ ಜಂಕ್ಷನ್‌ನಲ್ಲಿ ನಿಲುಗಡೆ ಕಲ್ಪಿಸುವಂತೆ ವಿಶ್ವನಾಥ ಖಾನಾಪೂರ ಮನವಿ

# ಗದಗಕ್ಕೆ ಕೈಕೊಟ್ಟ ಸ್ಪೆಷಲ್ ರೈಲುಗಳು..!

■ವಿಜಯಸಾಕ್ಷಿ ಸುದ್ದಿ, ಗದಗ

ಮೈಸೂರು-ಹಜರತ್ ನಿಜಾಮುದ್ದೀನ್ ಹಾಗೂ ಯಶವಂತಪುರ-ವಿಜಯಪುರ ವಿಶೇಷ ರೈಲುಗಳನ್ನು ಗದಗ ಬೈಪಾಸ್ ಮೂಲಕ ಸಂಚರಿಸಿ, ಗದಗ ಮೇನ್ ಜಂಕ್ಷನ್‌ನಲ್ಲಿ ನಿಲುಗಡೆ ನೀಡದಿರುವ ಕ್ರಮಕ್ಕೆ ಪ್ರಯಾಣಿಕರಲ್ಲಿ ತೀವ್ರ ಅಸಮಾಧಾನ ವ್ಯಕ್ತವಾಗಿದ್ದು, ತಕ್ಷಣವೇ ಗದಗ ಮೇನ್ ಜಂಕ್ಷನ್ ಹಾಗೂ ಬಾಗಲಕೋಟೆ ನಿಲ್ದಾಣಗಳಲ್ಲಿ ನಿಲುಗಡೆ ಕಲ್ಪಿಸಬೇಕೆಂದು ಗದಗ ಜಿಲ್ಲಾ ವಿಕಾಸ ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ ಆಗ್ರಹಿಸಿದ್ದಾರೆ.

ದಿ. 16ರಂದು ಸಂಜೆ 6.15ಕ್ಕೆ ಸಂಚರಿಸಿದ ಯಶವಂತಪುರ-ವಿಜಯಪುರ ವಿಶೇಷ ರೈಲು ಹಾಗೂ ದಿ. 21ರಂದು ಮುಂಜಾನೆ 4 ಗಂಟೆಗೆ ಸಂಚರಿಸಲಿರುವ ಮೈಸೂರು-ಹಜರತ್ ನಿಜಾಮುದ್ದೀನ್ ವಿಶೇಷ ರೈಲುಗಳು ಗದಗ ಬೈಪಾಸ್ ಮೂಲಕ ಸಂಚಾರ ಮಾಡುತ್ತಿವೆ. ರೈಲು ಸಂಖ್ಯೆ 06261 ವಿಶೇಷ ರೈಲು ಹುಬ್ಬಳ್ಳಿ ಬಿಟ್ಟ ನಂತರ ನೇರವಾಗಿ ವಿಜಯಪುರಕ್ಕೆ ಸಂಚರಿಸುತ್ತಿದ್ದು, ಗದಗ ಮೇನ್ ಜಂಕ್ಷನ್‌ನಲ್ಲಿ ನಿಲುಗಡೆ ಇಲ್ಲದೇ ಬೈಪಾಸ್ ಮೂಲಕ ಸಂಚರಿಸುತ್ತಿರುವುದು ಜಿಲ್ಲೆಯ ಪ್ರಯಾಣಿಕರಿಗೆ ತೀವ್ರ ತೊಂದರೆ ಉಂಟುಮಾಡುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಇದೇ ರೈಲು ವಾಪಸ್ 06262 ಸಂಖ್ಯೆಯಲ್ಲಿ ವಿಜಯಪುರದಿಂದ ಹೊರಟು ನೇರವಾಗಿ ಹುಬ್ಬಳ್ಳಿ ತಲುಪಿ ಮುಂದೆ ಮೈಸೂರಿಗೆ ಸಂಚರಿಸಲಿದ್ದು, ಈ ರೈಲುಗೂ ಗದಗ ಮೇನ್ ಜಂಕ್ಷನ್‌ನಲ್ಲಿ ನಿಲುಗಡೆ ಕಲ್ಪಿಸಬೇಕೆಂದು ಆಗ್ರಹಿಸಲಾಗಿದೆ.



ಇನ್ನೊಂದೆಡೆ, ರೈಲು ಸಂಖ್ಯೆ 06577 ಯಶವಂತಪುರ-ವಿಜಯಪುರ ವಿಶೇಷ ರೈಲು ಮೇ 16ರಿಂದ ಜೂನ್ 27ರವರೆಗೆ ಪ್ರತಿ ಶನಿವಾರ ಸಂಜೆ 6.15ಕ್ಕೆ ಯಶವಂತಪುರದಿಂದ ಹೊರಟು ಮರುದಿನ ಬೆಳಗ್ಗೆ 5.15ಕ್ಕೆ ವಿಜಯಪುರ ತಲುಪಲಿದೆ. ಈ ರೈಲು ಸಹ ಗದಗ ಬೈಪಾಸ್ ಮೂಲಕ ಸಂಚರಿಸುತ್ತಿದ್ದು, ಗದಗ ಹಾಗೂ ಬಾಗಲಕೋಟೆ ಭಾಗದ ಪ್ರಯಾಣಿಕರಿಗೆ ಭಾರೀ ತೊಂದರೆ ಉಂಟಾಗುತ್ತಿದೆ ಎಂದು ವಿಶ್ವನಾಥ ಖಾನಾಪೂರ ತಿಳಿಸಿದ್ದಾರೆ.

ವಾಪಸ್ ಸಂಚರಿಸುವ ರೈಲು ಸಂಖ್ಯೆ 06578 ಪ್ರತಿ ಭಾನುವಾರ ಸಂಜೆ 5 ಗಂಟೆಗೆ ವಿಜಯಪುರದಿಂದ ಹೊರಟು ಮರುದಿನ ಬೆಳಗ್ಗೆ 4 ಗಂಟೆಗೆ ಯಶವಂತಪುರ ತಲುಪಲಿದ್ದು, ಈ ರೈಲು ಸಹ ಗದಗ ಮೇನ್ ಜಂಕ್ಷನ್‌ನಲ್ಲಿ ನಿಲುಗಡೆ ಇಲ್ಲದೇ ಹಾವೇರಿ ಮೂಲಕ ಯಶವಂತಪುರ ತಲುಪಲಿದೆ. ಮತ್ತೆ ಈ ರೈಲು ಹುಬ್ಬಳ್ಳಿ ಬೈಪಾಸ್ ಮೂಲಕ ಬಾದಾಮಿ ಬಿಟ್ಟರೆ ನೇರವಾಗಿ ಹಾವೇರಿ ಮೂಲಕ ಯಶವಂತಪುರ ತಲುಪಲಿದ್ದು, ಗದಗ ಭಾಗದ ಪ್ರಯಾಣಿಕರನ್ನು ಸಂಪೂರ್ಣವಾಗಿ ನಿರ್ಲಕ್ಷ್ಯ ಮಾಡಲಾಗುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

ಈ ಕುರಿತು ಮಾಜಿ ಮುಖ್ಯಮಂತ್ರಿ ಹಾಗೂ ಲೋಕಸಭಾ ಸದಸ್ಯ ಬಸವರಾಜ ಬೊಮ್ಮಾಯಿ ಅವರಿಗೆ ಮನವಿ ಸಲ್ಲಿಸಲಾಗಿದ್ದು, "ಗದಗ ಮೇನ್ ಜಂಕ್ಷನ್ ಮೂಲಕ ವಿಜಯಪುರಕ್ಕೆ ಹೋಗುವ ರೈಲುಗಳು ಗದಗ ಮೇನ್ ಜಂಕ್ಷನ್ ಮೂಲಕವೇ ಸಂಚಾರ ಆಗುತ್ತವೆ" ಎಂದು ಅವರು ತಿಳಿಸಿದ್ದರು ಎಂದು ಖಾನಾಪೂರ ಹೇಳಿದ್ದಾರೆ.

> "ಗದಗ ಮೇನ್ ಜಂಕ್ಷನ್ ಉತ್ತರ ಕರ್ನಾಟಕದ ಪ್ರಮುಖ ರೈಲು ನಿಲ್ದಾಣ. ಇಲ್ಲಿಗೆ ನಿಲುಗಡೆ ನೀಡದೇ ವಿಶೇಷ ರೈಲುಗಳನ್ನು ಬೈಪಾಸ್ ಮೂಲಕ ಓಡಿಸುವುದು ಜಿಲ್ಲೆಯ ಜನತೆಗೆ ಮಾಡುತ್ತಿರುವ ಅನ್ಯಾಯ. ಗದಗ ಹಾಗೂ ಬಾಗಲಕೋಟೆ ಭಾಗದ ಸಾವಿರಾರು ಪ್ರಯಾಣಿಕರಿಗೆ ಅನುಕೂಲವಾಗುವಂತೆ ತಕ್ಷಣವೇ ನಿಲುಗಡೆ ಕಲ್ಪಿಸಬೇಕು."
> **– ವಿಶ್ವನಾಥ ಖಾನಾಪೂರ,**
> ಅಧ್ಯಕ್ಷರು, ಗದಗ ಜಿಲ್ಲಾ ವಿಕಾಸ ವೇದಿಕೆ

ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ, ರಾಜ್ಯ ರೈಲ್ವೆ ಸಚಿವ ವಿ. ಸೋಮಣ್ಣ, ನೈರುತ್ಯ ರೈಲ್ವೆ ಇಲಾಖೆ ಹಾಗೂ ವಿಜಯಪುರ ಲೋಕಸಭಾ ಸದಸ್ಯ ರಮೇಶ್ ಜಿಗಜಿಣಗಿ ಅವರಿಗೆ ಬಸವರಾಜ ಬೊಮ್ಮಾಯಿ ಅವರು ಸಹ ಮನವರಿಕೆ ಮಾಡಿದರೂ ಸಹ ಗದಗ ಮೇನ್ ಜಂಕ್ಷನ್‌ಗೆ ನಿಲುಗಡೆ ಇಲ್ಲದೇ ರೈಲುಗಳು ಸಂಚರಿಸುತ್ತಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ.

ಇನ್ನಾದರೂ ವಿಶೇಷ ರೈಲುಗಳಿಗೆ ಗದಗ ಮೇನ್ ಜಂಕ್ಷನ್‌ನಲ್ಲಿ ನಿಲುಗಡೆ ಕಲ್ಪಿಸಿ, ಗದಗ ಮಾರ್ಗದ ಮೂಲಕವೇ ಸಂಚಾರಕ್ಕೆ ಅವಕಾಶ ಮಾಡಿಕೊಡಬೇಕೆಂದು ಗದಗ ಜಿಲ್ಲಾ ವಿಕಾಸ ವೇದಿಕೆ ಪರವಾಗಿ ಜಗದೀಶ ಕಂಗೂರಿ, ಶಿದ್ದಪ್ಪ ಜರತಖಿನಿ, ವೆಂಕಟೇಶ ಕಬಾಡಿ, ರಜಾಕ್ ನೂರಭಾಷಾ, ಶಿವಮೂರ್ತಯ್ಯ ಪುರಾಣಿಕಮಠ ಸೇರಿದಂತೆ ಹಲವರು ಒತ್ತಾಯಿಸಿದ್ದಾರೆ.

## ಜೆಇಇ, ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳಿಗೆ ಕಟ್ಟೆಚ್ಚರ..!

▸▸ ಮೊದಲನೇ ಪುಟದಿಂದ

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷಾ ಕರ್ತವ್ಯ ನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದಕ್ಕಿಂತ ಹೆಚ್ಚು ಜನರು ಗುಂಪು ಸೇರುವುದು, ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ.

ಪರೀಕ್ಷಾ ಕೇಂದ್ರದ ಸುತ್ತಲಿನ ಝೆರಾಕ್ಸ್ ಅಂಗಡಿ, ಬುಕ್‌ಸ್ಟಾಲ್ ಹಾಗೂ ಫೋಟೋಕಾಪಿ ಅಂಗಡಿಗಳನ್ನು ಬಂದ್ ಮಾಡಲು ಆದೇಶಿಸಲಾಗಿದೆ. ಪರೀಕ್ಷಾ ಕೇಂದ್ರಗಳಿಗೆ ಮೊಬೈಲ್ ಫೋನ್ ಸೇರಿದಂತೆ ಇತರೆ ಸಂಪರ್ಕ ಸಾಧನಗಳನ್ನು ತರುವುದನ್ನೂ ಸಂಪೂರ್ಣ ನಿಷೇಧಿಸಲಾಗಿದೆ.

ಪರೀಕ್ಷಾ ದಿನ ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರಗಳಿಗೆ ಆಗಮಿಸುವ ಹಾಗೂ ಹೊರ ಹೋಗುವ ವೇಳೆಯಲ್ಲಿ ಮಾತ್ರ ಮಾಧ್ಯಮ ಪ್ರತಿನಿಧಿಗಳಿಗೆ ಚಿತ್ರೀಕರಣ-ಕ್ಕೆ ಅವಕಾಶ ಕಲ್ಪಿಸಲಾಗಿದ್ದು, ಪರೀಕ್ಷಾ ಕೊಠಡಿಗಳೊಳಗೆ ಪ್ರವೇಶ ಹಾಗೂ ಚಿತ್ರೀಕರಣವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇದೇ ವೇಳೆ, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯಿಂದ ಮೇ 18ರಿಂದ 23ರವರೆಗೆ ನಡೆಯಲಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆ-2 ಹಿನ್ನೆಲೆಯಲ್ಲಿ ಜಿಲ್ಲೆಯ 7 ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವನ್ನಾಗಿ ಘೋಷಿಸಲಾಗಿದೆ.

ಮೇ 18ರಿಂದ 23ರವರೆಗೆ ಪ್ರತಿದಿನ ಬೆಳಿಗ್ಗೆ 9.30ರಿಂದ ಮಧ್ಯಾಹ್ನ 2.30ರವರೆಗೆ ಪ್ರತಿಬಂಧಕಾಜ್ಞೆ ಜಾರಿಯಲ್ಲಿರಲಿದೆ.

ಎಸ್‌ಎಸ್‌ಎಲ್‌ಸಿ ಪರೀಕ್ಷಾ ಕೇಂದ್ರಗಳಲ್ಲಿಯೂ ಇದೇ ರೀತಿಯ ಕಟ್ಟುನಿಟ್ಟಿನ ನಿಯಮ ಜಾರಿಗೊಳಿಸಲಾಗಿದ್ದು, ಪರೀಕ್ಷಾರ್ಥಿಗಳು ಹಾಗೂ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಯನ್ನು ಹೊರತುಪಡಿಸಿ ಇತರರ ಪ್ರವೇಶ ನಿರ್ಬಂಧಿಸಲಾಗಿದೆ. ಝೆರಾಕ್ಸ್ ಅಂಗಡಿ, ಬುಕ್‌ಸ್ಟಾಲ್, ಫೋಟೋಕಾಪಿ ಕೇಂದ್ರಗಳನ್ನು ಬಂದ್ ಮಾಡಲು ಸೂಚನೆ ನೀಡಲಾಗಿದೆ.

ಮೊಬೈಲ್ ಫೋನ್ ಹಾಗೂ ಇತರೆ ಸಂಪರ್ಕ ಸಾಧನಗಳನ್ನು ಪರೀಕ್ಷಾ ಕೇಂದ್ರಗಳಿಗೆ ತರುವುದನ್ನು ನಿಷೇಧಿಸಲಾಗಿದ್ದು, ಪರೀಕ್ಷಾ ಗೌಪ್ಯತೆ ಕಾಪಾಡುವ ಉದ್ದೇಶದಿಂದ ಪರೀಕ್ಷಾ ಕೊಠಡಿಗಳೊಳಗೆ ಮಾಧ್ಯಮ ಪ್ರವೇಶ ಹಾಗೂ ಚಿತ್ರೀಕರಣಕ್ಕೆ ಅವಕಾಶ ಇರುವುದಿಲ್ಲ ಎಂದು ಜಿಲ್ಲಾಡಳಿತ ಸ್ಪಷ್ಟಪಡಿಸಿದೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಶಿರಹಟ್ಟಿ ತಾಲೂಕು ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ಹಾಗೂ ಬಾಲಕಿಯರ ವಸತಿ ನಿಲಯಗಳ 2026-27ನೇ ಸಾಲಿನ ಖಾಲಿ ಇರುವ ಸೀಟುಗಳಿಗೆ ಅರ್ಹ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪ್ರವೇಶ ಬಯಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ [ಸಮಾಜ ಕಲ್ಯಾಣ ಇಲಾಖೆ ವೆಬ್‌ಸೈಟ್](https://swd.karnataka.gov.in/?utm_source=chatgpt.com) ಅಥವಾ [ಎಸ್‌ಡಬ್ಲ್ಯುಡಿಎಚ್‌ಎಂಐಎಸ್ ಪೋರ್ಟಲ್](https://swdhmis.karnataka.gov.in/?utm_source=chatgpt.com) ನಲ್ಲಿ ನೋಂದಣಿ ಮಾಡಿಕೊಂಡು, ಲಾಗಿನ್ ಐಡಿ ಮತ್ತು ಪಾಸ್‌ವರ್ಡ್ ಬಳಸಿ ಇ-ಕೆವೈಸಿ ಮೂಲಕ ವಸತಿ ನಿಲಯ ಪ್ರವೇಶಕ್ಕೆ ಅರ್ಜಿ ಸಲ್ಲಿಸಬಹುದು.

ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ಅದರ ಸ್ವೀಕೃತಿ ಪ್ರತಿಗೆ ಸಂಬಂಧಿಸಿದ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಪಡೆದು, ವಿದ್ಯಾರ್ಥಿಗಳ SATS ಸಂಖ್ಯೆ, ಆಧಾರ್ ಕಾರ್ಡ್ ಪ್ರತಿ, ಆಧಾರ್‌ಗೆ ಲಿಂಕ್ ಆಗಿರುವ ಮೊಬೈಲ್ ಸಂಖ್ಯೆ, ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ, ಮೂರು ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ, ಹಿಂದಿನ ತರಗತಿಯ ಅಂಕಪಟ್ಟಿ ಹಾಗೂ ಪಡಿತರ ಚೀಟಿ ಪ್ರತಿಗಳನ್ನು ಲಗತ್ತಿಸಿ ಸಮಾಜ ಕಲ್ಯಾಣ ಇಲಾಖೆ ಶಿರಹಟ್ಟಿ ಕಾರ್ಯಾಲಯಕ್ಕೆ ಸಲ್ಲಿಸಬೇಕು.

ಅರ್ಜಿಗಳನ್ನು ಸಂಬಂಧಿಸಿದ ಮುಖ್ಯೋಪಾಧ್ಯಾಯರಿಂದ ದೃಢೀಕರಿಸಿ ಸಲ್ಲಿಸಬೇಕಾಗಿದ್ದು, ಜೂನ್ 30 ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿದೆ.

ಸೀಟುಗಳ ಲಭ್ಯತೆ ಆಧರಿಸಿ ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲಾಗುವುದು ಎಂದು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ 08487-295097 ಸಂಖ್ಯೆಗೆ ಸಂಪರ್ಕಿಸಬಹುದಾಗಿದ್ದು, ಸಮಾಜ ಕಲ್ಯಾಣ ಇಲಾಖೆ ಶಿರಹಟ್ಟಿ ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ರೈತ ಕುಟುಂಬಕ್ಕೆ ₹5 ಲಕ್ಷ ಪರಿಹಾರ ವಿತರಿಸಿದ ಶಾಸಕ ನೇಮಿರಾಜ ನಾಯ್ಕ

# ಸಿಡಿಲಿನ ದುರಂತಕ್ಕೆ ಸರ್ಕಾರದ ನೆರವು

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಮೆಟ್ರಿ ಗ್ರಾಮದಲ್ಲಿ ಸಿಡಿಲಿಗೆ ಬಲಿಯಾದ ರೈತ ಗಿರನಹಳ್ಳಿ ನಾಗಪ್ಪ ಅವರ ಕುಟುಂಬಕ್ಕೆ ಪ್ರಕೃತಿ ವಿಕೋಪ ನಿಧಿಯಿಂದ ₹5 ಲಕ್ಷ ಪರಿಹಾರವನ್ನು ಶಾಸಕ ಕೆ. ನೇಮಿರಾಜ ನಾಯ್ಕ ವಿತರಿಸಿದರು.

ಕಳೆದ ವಾರ ಸುರಿದ ಭಾರೀ ಮಳೆ ಹಾಗೂ ಸಿಡಿಲಿನ ಪರಿಣಾಮ ರೈತ ನಾಗಪ್ಪ ಮೃತಪಟ್ಟಿದ್ದರು. ಅವರ ಪತ್ನಿ ನಿಂಗಮ್ಮ ಅವರಿಗೆ ಶಾಸಕರು ಪರಿಹಾರದ ಚೆಕ್ ಹಸ್ತಾಂತರಿಸಿದರು.

ಈ ವೇಳೆ ಮಾತನಾಡಿದ ಶಾಸಕ ನೇಮಿರಾಜ ನಾಯ್ಕ, "ಕುಟುಂಬದ ಆಧಾರಸ್ತಂಭವನ್ನು ಕಳೆದುಕೊಂಡಿರುವ ನೋವು ದೊಡ್ಡದು. ಸರ್ಕಾರದಿಂದ ನೀಡಿರುವ ಈ ಪರಿಹಾರವನ್ನು ಜೀವನೋಪಾಯಕ್ಕಾಗಿ ಸದುಪಯೋಗಪಡಿಸಿಕೊಳ್ಳಬೇಕು" ಎಂದು ಹೇಳಿದರು.



ಇದೇ ವೇಳೆ ಹಗರಿಬೊಮ್ಮನಹಳ್ಳಿ ತಾಲೂಕಿನ ಉಪ್ಪಾರಗಟ್ಟಿ ಗ್ರಾಮದಲ್ಲಿ ಅಜ್ಜಪ್ಪ ಅವರಿಗೆ ಸೇರಿದ 27 ಕುರಿಗಳು ಹಾಗೂ 3 ಆಡುಗಳು ಸಿಡಿಲಿಗೆ ಬಲಿಯಾಗಿದ್ದ ಹಿನ್ನೆಲೆಯಲ್ಲಿ, ಕುರಿಗಳಿಗೆ ತಲಾ ₹4 ಸಾವಿರ ಹಾಗೂ ಆಡುಗಳಿಗೆ ತಲಾ ₹3 ಸಾವಿರದಂತೆ ಪರಿಹಾರ ವಿತರಿಸಲಾಯಿತು.

> "ಪ್ರಕೃತಿ ವಿಕೋಪದಿಂದ ಸಂಕಷ್ಟಕ್ಕೆ ಸಿಲುಕಿದ ಕುಟುಂಬಗಳಿಗೆ ಸರ್ಕಾರದ ನೆರವು ತಲುಪಿಸುವ ಕೆಲಸ ನಿರಂತರವಾಗಿರುತ್ತದೆ."
> **– ಕೆ. ನೇಮಿರಾಜ ನಾಯ್ಕ, ಶಾಸಕ**

ಕಾರ್ಯಕ್ರಮದಲ್ಲಿ ಉಪ ತಹಸೀಲ್ದಾರ್ ಶಿವಕುಮಾರ ಗೌಡ, ಪಶುವೈದ್ಯಾಧಿಕಾರಿ ಡಾ. ಪೂಜಾರ್ ಸೂರಪ್ಪ, ತಾಲೂಕು ಜೆಡಿಎಸ್ ಅಧ್ಯಕ್ಷ ವೈ. ಮಲ್ಲಿಕಾರ್ಜುನ, ಚಂದ್ರಪ್ಪ ದಸಮಾಪುರ, ಬ್ಯಾಟಿ ನಾಗರಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಪಡಿತರ ಕಾರ್ಡ್‌ಗೆ ಮತ್ತೆ ಅವಕಾಶ..!

▸▸ ಮೊದಲನೇ ಪುಟದಿಂದ

ಪಡಿತರ ಚೀಟಿಯಲ್ಲಿ ಹೆಸರು ಸೇರ್ಪಡೆ ಹಾಗೂ ತಿದ್ದುಪಡಿಗೆ ಸಾರ್ವಜನಿಕರು ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದ್ದು, ಇದಕ್ಕೂ ಬೆಳಿಗ್ಗೆ 10ರಿಂದ ಸಂಜೆ 5 ಗಂಟೆಯವರೆಗೆ ಸಮಯ ನಿಗದಿಪಡಿಸಲಾಗಿದೆ.

ಹೆಸರು ಸೇರ್ಪಡೆ ಮತ್ತು ತಿದ್ದುಪಡಿಗೆ ಸಲ್ಲಿಸಲಾದ ಅರ್ಜಿಗಳನ್ನು ಮಂಜೂರು ಮಾಡಲು ಆಹಾರ ನಿರೀಕ್ಷಕರಿಗೆ ಬೆಳಿಗ್ಗೆ 10ರಿಂದ ರಾತ್ರಿ 9 ಗಂಟೆಯವರೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಸಾರ್ವಜನಿಕರು ಈ ಸೌಲಭ್ಯಗಳ ಸದುಪಯೋಗ ಪಡೆದುಕೊಳ್ಳಬೇಕೆಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪನಿರ್ದೇಶಕರು ಮನವಿ ಮಾಡಿದ್ದಾರೆ.

### ವಲ್ಲಭಾಪುರ ಹಿಟ್ ಅಂಡ್ ರನ್ ಪ್ರಕರಣ ಭೇದಿಸಿದ ಹಗರಿಬೊಮ್ಮನಹಳ್ಳಿ ಪೊಲೀಸರು

# ಹಿಟ್ ಅಂಡ್ ರನ್ ಕೇಸ್‌ಗೆ ಕ್ಲೈಮ್ಯಾಕ್ಸ್..!

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಡಿಕ್ಕಿ ಹೊಡೆದು ವ್ಯಕ್ತಿಯೊಬ್ಬರನ್ನು ಬಲಿ ಪಡೆದು ಪರಾರಿಯಾಗಿದ್ದ ವಾಹನವನ್ನು ಹಗರಿಬೊಮ್ಮನಹಳ್ಳಿ ಪೊಲೀಸರು ಪತ್ತೆ ಹಚ್ಚಿ ಹಿಟ್ ಅಂಡ್ ರನ್ ಪ್ರಕರಣವನ್ನು ಭೇದಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಮೇ 7ರಂದು ಮಧ್ಯಾಹ್ನ ಸುಮಾರು 2.30ರ ವೇಳೆಗೆ ವಲ್ಲಭಾಪುರ ಗ್ರಾಮದ ಸಮೀಪ ಹಳೆ ಹಗರಿಬೊಮ್ಮನಹಳ್ಳಿ ನಿವಾಸಿ ಮುಂಡರಗಿ ನಾಗರಾಜ್ ಅವರಿಗೆ ವೇಗವಾಗಿ ಬಂದ ಅಪರಿಚಿತ ವಾಹನ ಡಿಕ್ಕಿ ಹೊಡೆದು ನಿಲ್ಲಿಸದೆ ಪರಾರಿಯಾಗಿತ್ತು. ಅಪಘಾತದ ತೀವ್ರತೆಗೆ ನಾಗರಾಜ್ ಸ್ಥಳದಲ್ಲೇ ಮೃತಪಟ್ಟಿದ್ದರು.




ಪ್ರಕರಣ ದಾಖಲಿಸಿಕೊಂಡ ಹಗರಿಬೊಮ್ಮನಹಳ್ಳಿ ಪೊಲೀಸರು ಆರೋಪಿತ ವಾಹನಕ್ಕಾಗಿ ಬಲೆ ಬೀಸಿದ್ದರು. ವೃತ್ತ ನಿರೀಕ್ಷಕ ವಿಕಾಸ್ ಪಿ. ಲಮಾಣಿ ಮಾರ್ಗದರ್ಶನದಲ್ಲಿ ಪಿಎಸ್‌ಐ ಉಮಾಪತಿ ನಾಯ್ಕ ನೇತೃತ್ವದಲ್ಲಿ ವಿಶೇಷ ತಂಡ ರಚಿಸಿ ಕಾರ್ಯಾಚರಣೆ ಕೈಗೊಳ್ಳಲಾಗಿತ್ತು.

ಮುಖ್ಯ ಪೇದೆಗಳಾದ ಮಲ್ಲೇಶ್ ನಾಯ್ಕ, ಸಿದ್ದೇಶ್, ಶಂಕರ್ ನಾಯ್ಕ, ಭೋಜ್ಯ ನಾಯ್ಕ, ಪರಶುರಾಮ್ ವೈ., ದೊಡ್ಡ ಬಸವರಾಜ್ ಹಾಗೂ ಯಮುನಪ್ಪ ಬಂಡೆ ಸತತ ತನಿಖೆ ನಡೆಸಿ ಕೊನೆಗೆ ಅಪಘಾತ ಎಸಗಿದ ವಾಹನವನ್ನು ಬಳ್ಳಾರಿಯಲ್ಲಿ ಪತ್ತೆ ಹಚ್ಚುವಲ್ಲಿ ಯಶಸ್ವಿಯಾದರು.

ಪ್ರಕರಣ ಭೇದಿಸಿದ ಪೊಲೀಸ್ ತಂಡದ ಕಾರ್ಯವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹೊಸಪೇಟೆ ಹಾಗೂ ಕೂಡ್ಲಿಗಿ ಡಿವೈಎಸ್ಪಿ ಶ್ಲಾಘಿಸಿದ್ದಾರೆ.

ಹಗರಿಬೊಮ್ಮನಹಳ್ಳಿ ಸಾರ್ವಜನಿಕರೂ ಪೊಲೀಸರ ಕಾರ್ಯಕ್ಷಮತೆಗೆ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

## ನಿಧನ

### ಯಚ್ಚರಪ್ಪ ಆಲೂರ



ಗದಗ: ತಾಲೂಕಿನ ನರಸಾಪೂರ ಗ್ರಾಮದ ಖಾದಿ ನಗರದ ನಿವಾಸಿ ಯಚ್ಚರಪ್ಪ ಯಂಕಪ್ಪ ಆಲೂರ (88) ಅವರು ಶುಕ್ರವಾರ ನಿಧನರಾದರು.

ಮೃತರು ಮೂವರು ಪುತ್ರರು, ನಾಲ್ವರು ಪುತ್ರಿಯರು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka